ಸುದ್ದಿ ಹಾಗೂ ಜಾಹೀರಾತಿಗೆ ಸಂಪರ್ಕಿಸಿ
9980498553
9606979449

RNI: KNKAN/ 25/A2724

# ಉತ್ತರ ಕರ್ನಾಟಕ ಸುದ್ದಿಗಳು

UTTARA KARNATAKA SUDDIGALU
Kannada Daily Morning
ಕನ್ನಡ ದಿನಪತ್ರಿಕೆ

Email
uttarkarnatkasuddigalu@gmail.com

ಸಂಪಾದಕರು: ಅವಿನಾಶ ಎಸ್. ಸಾಲಿಮನಿ




ಅರ್ಥಪೂರ್ಣ ಹಾಗೂ ವ್ಯವಸ್ಥಿತ ಆಚರಣೆಗೆ ಕ್ರಮ ವಹಿಸಿ: ಜಿಲ್ಲಾಧಿಕಾರಿ »3

ಚುನಾವಣಾ ನೀತಿ ಸಂಹಿತೆ: ಮಹರ್ಷಿ ವಾಲ್ಮೀಕಿ ಜಯಂತಿ ಸಾಂಕೇತಿಕ ಆಚರಣೆ »4

ಆರೋಗ್ಯದ ಹೆಸರಿನಲ್ಲಿ ಲೂಟಿ, ಔಷಧದ ಹೆಸರಿನಲ್ಲಿ ವಂಚನೆ »4

ಸಂಪುಟ(Volume): 1 ಸಂಚಿಕೆ (Issue): 301 ● ಪುಟ (Page): 4 ● ದರ: Rs. 4 ಶುಕ್ರವಾರ 16 ಅಕ್ಟೋಬರ್ 2026 ● 16 OCTOBER 2026 ● ಧಾರವಾಡ ● ಹಾವೇರಿ ● ಗದಗ ● ಕೊಪ್ಪಳ ● ವಿಜಯನಗರ ● ರಾಯಚೂರು ● ವಿಜಯಪುರ ● ಬಾಗಲಕೋಟೆ ● ಬೆಳಗಾವಿ ಉತ್ತರ ಕನ್ನಡ

## ಸ್ಟಿಂಗ್ ಕ್ರಮ ನಿರ್ಧಾರ ಸಿಎಂ ಡಿಕೆಶಿಗೆ

### ಸಭೆಯಲ್ಲಿ ಒಂದು ಗಂಟೆಗೂ ಹೆಚ್ಚು ಕಾಲ ಗಂಭೀರ ಚರ್ಚೆ । ಸದ್ಯಕ್ಕಿಲ್ಲ ಎಸ್‌ಐಟಿ ರಚನೆ

**ಬೆಂಗಳೂರು:** ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗುರಿಯಾಗಿಸಿಕೊಂಡಿದೆ ಎನ್ನಲಾದ ಸ್ಟಿಂಗ್ ಆಪರೇಷನ್ ಪ್ರಕರಣದ ಕುರಿತು ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಒಂದು ಗಂಟೆಗೂ ಹೆಚ್ಚು ಕಾಲ ಗಂಭೀರ ಚರ್ಚೆ ನಡೆಯಿತು.

ಪ್ರಕರಣದ ಮುಂದಿನ ಕ್ರಮದ ನಿರ್ಧಾರವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಬಿಡಲಾಗಿದ್ದು, ಸದ್ಯಕ್ಕೆ ಪ್ರತ್ಯೇಕ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸದಿರಲು ಸರ್ಕಾರ ನಿರ್ಧರಿಸಿದೆ. ಸಭೆಯ ಬಳಿಕ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಈಗಾಗಲೇ ನಡೆಯುತ್ತಿರುವ ತನಿಖೆ ಮುಂದುವರಿಯಲಿದ್ದು, ಸಂಗ್ರಹಿಸಿರುವ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

"ತನಿಖೆ ಮುಕ್ತವಾಗಿ ಮತ್ತು ಪಾರದರ್ಶಕವಾಗಿ ನಡೆಯಲಿದೆ. ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ. ಅಗತ್ಯ ಬಿದ್ದರೆ ಪ್ರಕರಣವನ್ನು ಸೂಕ್ತ ತನಿಖಾ ಸಂಸ್ಥೆಗೆ ವಹಿಸಲು ಸರ್ಕಾರ ಹಿಂಜರಿಯುವುದಿಲ್ಲ" ಎಂದು ಹೇಳಿದರು. ಅಂತೆಯೇ ವಿಡಿಯೋ ನಕಲಿ ಎಂದು ಸಿದ್ದರಾಮಯ್ಯ ಹೇಳಿದ್ದು, ಅದರ ಹಿಂದಿನ ಪರಿಸ್ಥಿತಿಗಳ ಬಗ್ಗೆ ತನಿಖೆ ನಡೆಸುವಂತೆ ಒತ್ತಾಯಿಸಿದ್ದಾರೆ ಎಂದು ಖರ್ಗೆ ತಿಳಿಸಿದರು. "ನಮ್ಮ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಘನತೆ ಮತ್ತು ಗೌರವಕ್ಕಿಂತ ಮುಖ್ಯವಾದುದು ಯಾವುದೂ ಇಲ್ಲ" ಎಂದರು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಪ್ರಕರಣದ ತನಿಖೆ ಕುರಿತು ಮಾಡಿರುವ ಹೇಳಿಕೆಗಳನ್ನೂ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದರು. ಸರ್ಕಾರ ವಿಚಾರಣೆಗೆ ಯಾರನ್ನು ಕರೆದಿದೆ, ಯಾರನ್ನು ಕರೆದಿಲ್ಲ ಎಂಬ ಮಾಹಿತಿ ಕುಮಾರಸ್ವಾಮಿ ಅವರಿಗೆ ಹೇಗೆ ತಿಳಿಯಿತು ಎಂದು ಪ್ರಶ್ನಿಸಿದ ಅವರು, ಈ ವಿವಾದದ ಮೂಲಕ ರಾಜಕೀಯ ಲಾಭ ಪಡೆಯಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

"ರೈತರ ಸಂಕಷ್ಟ ಸೇರಿದಂತೆ ಜನರ ಹಲವು ಸಮಸ್ಯೆಗಳ ಕುರಿತು ಚರ್ಚಿಸಲು ಸಂಪುಟ ಸಭೆ ಸೇರಿತ್ತು. ಸ್ಟಿಂಗ್ ಆಪರೇಷನ್ ಮತ್ತು ಎಚ್.ಡಿ. ಕುಮಾರಸ್ವಾಮಿ ಅವರ




ಆರೋಪಗಳನ್ನೇ ಚರ್ಚಿಸಲು ನಾವೇನೂ ಕೆಲಸವಿಲ್ಲದ ಸಂಪುಟವಲ್ಲ" ಎಂದು ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದರು.

**ಶೇ. 56ರ ಮೀಸಲಾತಿ ರದ್ದತಿ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಸರ್ಕಾರ:** ಇದೇ ವೇಳೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹೆಚ್ಚಳ ಸೇರಿದಂತೆ ಒಟ್ಟು ಶೇ. 56ರ ಮೀಸಲಾತಿಯನ್ನು ರದ್ದುಗೊಳಿಸಿದ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ವಿಶೇಷ ಮೇಲ್ಮನವಿ ಅರ್ಜಿ (ಎಸ್‌ಎಲ್‌ಪಿ) ಸಲ್ಲಿಸಲು ಸಚಿವ ಸಂಪುಟ ನಿರ್ಧರಿಸಿದೆ.

ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಈ ನಿರ್ಧಾರವನ್ನು ಖಚಿತಪಡಿಸಿದ್ದಾರೆ. ಹೈಕೋರ್ಟ್ ಆದೇಶವು ರಾಜ್ಯದ ಸರ್ಕಾರಿ ಹುದ್ದೆಗಳು ಮತ್ತು ವಿವಿಧ ಸಂಸ್ಥೆಗಳ ನೇಮಕಾತಿ ಪ್ರಕ್ರಿಯೆಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ ಎಂದು ಅವರು ತಿಳಿಸಿದ್ದಾರೆ. ಹಿಂದಿನ ಬಿಜೆಪಿ ಸರ್ಕಾರ ಹೆಚ್ಚುವರಿ ಮೀಸಲಾತಿಯನ್ನು ಜಾರಿಗೆ ತಂದಿತ್ತು. ಕರ್ನಾಟಕ ಆಡಳಿತ ಸೇವೆ (ಕೆಎಎಸ್) ಸೇರಿದಂತೆ ಹಲವು ಹುದ್ದೆಗಳ ನೇಮಕಾತಿ ಅಧಿಸೂಚನೆಗಳಲ್ಲೂ ಈ ಮೀಸಲಾತಿಯನ್ನು ಆಧಾರವಾಗಿ ಬಳಸಲಾಗಿತ್ತು. ಹೈಕೋರ್ಟ್ ನೇಮಕಾತಿ ಪ್ರಕ್ರಿಯೆ ಮುಂದುವರಿಸಲು ಅವಕಾಶ ನೀಡಿದ್ದರೂ, ಅಂತಿಮ ಆಯ್ಕೆಯನ್ನು ತನ್ನ ಆದೇಶಗಳಿಗೆ ಒಳಪಡಿಸಿತ್ತು.

ಹೆಚ್ಚುವರಿ ಮೀಸಲಾತಿ ರದ್ದಾಗಿರುವ ಹಿನ್ನೆಲೆಯಲ್ಲಿ, ಸುಪ್ರೀಂ ಕೋರ್ಟ್‌ನಿಂದ ಪರಿಹಾರ ದೊರೆಯದಿದ್ದರೆ ಈಗಿರುವ ಶೇ. 50ರ ಮೀಸಲಾತಿ ಮಿತಿಯೇ ಅನ್ವಯವಾಗಲಿದೆ. ಇದರಿಂದ ನಡೆಯುತ್ತಿರುವ ಮತ್ತು ಮುಂದಿನ ನೇಮಕಾತಿಗಳ ಮೇಲೆ ಆಗಬಹುದಾದ ಪರಿಣಾಮಗಳ ಬಗ್ಗೆ ಸರ್ಕಾರ ಕಳವಳ ವ್ಯಕ್ತಪಡಿಸಿದೆ.

ಹೆಚ್ಚುವರಿ ಎಸ್‌ಸಿ, ಎಸ್‌ಟಿ ಮೀಸಲಾತಿಯನ್ನು ಸಂವಿಧಾನದ ಒಂಬತ್ತನೇ ಅನುಸೂಚಿಗೆ ಸೇರಿಸುವ ಸಾಧ್ಯತೆಯ ಬಗ್ಗೆಯೂ ಸಂಪುಟ ಸಭೆಯಲ್ಲಿ ಚರ್ಚೆಯಾಗಿದೆ. ಆದರೆ, ಈ ವಿಚಾರವನ್ನು ಡಿ.ಕೆ. ಶಿವಕುಮಾರ್ ನೇತೃತ್ವದ ರಾಜಕೀಯ ವ್ಯವಹಾರಗಳ ಸಮಿತಿಯಲ್ಲಿ ಮುಂದಿನ ಹಂತಕ್ಕೆ ಕೊಂಡೊಯ್ಯಲು ನಿರ್ಧರಿಸಲಾಗಿದೆ. ಈ ಸಂಬಂಧ ಕೇಂದ್ರ ಸರ್ಕಾರವೂ ನಿರ್ಧಾರ ಕೈಗೊಳ್ಳಬೇಕಾಗುತ್ತದೆ.

ಎಸ್‌ಸಿ, ಎಸ್‌ಟಿ ಸಮುದಾಯಗಳ ಹಿತಾಸಕ್ತಿ ಕಾಪಾಡುವುದರ ಜೊತೆಗೆ ಹೆಚ್ಚುವರಿ ಮೀಸಲಾತಿ ಆಧಾರಿತ ನೇಮಕಾತಿಗಳಲ್ಲಿನ ಅನಿಶ್ಚಿತತೆಯನ್ನು ನಿವಾರಿಸಲು ರಾಜ್ಯ ಸರ್ಕಾರ ಕಾನೂನು ಹೋರಾಟಕ್ಕೆ ಮುಂದಾಗಿದೆ.

## ನಿಮಗೆ, ನಿಮ್ಮಪ್ಪನಿಗೆ ಇನ್ನೆಷ್ಟು ವರ್ಷ ಮೀಸಲು ಕ್ಷೇತ್ರ ಬೇಕು; ಖರ್ಗೆ ವಿರುದ್ಧ ಎಚ್‌ಡಿಕೆ ಕಿಡಿ

**ಬೆಂಗಳೂರು:** ಬಲಿತ ದಲಿತನೇ, ನಿಮಗೆ, ನಿಮ್ಮಪ್ಪನಿಗೆ ಇನ್ನೆಷ್ಟು ವರ್ಷ ಮೀಸಲು ಕ್ಷೇತ್ರಗಳು ಬೇಕು? ಸಾಮಾನ್ಯ ಕ್ಷೇತ್ರದಲ್ಲಿ ಸ್ಪರ್ಧಿಸಿ ಗೆದ್ದು ಬನ್ನಿ ಎಂದು ಪ್ರಿಯಾಂಕ್ ಖರ್ಗೆ ವಿರುದ್ಧ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

ಸ್ಟಿಂಗ್ ಆಪರೇಷನ್ ತನಿಖೆ ವಿಚಾರವಾಗಿ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಹಾಗೂ ರಾಜ್ಯ ಗೃಹ ಸಚಿವ ಪ್ರಿಯಾಂಕ್ ಖರ್ಗೆ ನಡುವೆ ಪರಸ್ಪರ ವಾಕ್ಸಮರ ನಡೆಯುತ್ತಿದೆ. ತನಿಖೆ ವೇಳೆ ಜೆಡಿಎಸ್



ಕಾರ್ಯಕರ್ತರ ಬಂಧಿಸಿದಕ್ಕಾಗಿ ಕುಮಾರಸ್ವಾಮಿ ಗರಂ ಆಗಿದ್ದು, ಗೃಹ ಸಚಿವರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

**ಹುದ್ದೆಗೆ ನಾಲಾಯಕ್:** ಸಿದ್ದರಾಮಯ್ಯ ವಿರುದ್ಧ ನಡೆದ ಸ್ಟಿಂಗ್ ಸಂಚಿನಲ್ಲಿ ಶಾಮೀಲಾಗಿ ಅವರ ಪದಚ್ಯುತಿಗೆ ಕಾರಣನಾದ ನೀಲಿಕಣ್ಣಿನ ಮಂತ್ರಿ ಪ್ರಿಯಾಂಕ್ ಖರ್ಗೆ, ಸ್ಟಿಂಗ್ ಮಾಡಿದ ಅಸಲಿ ಕಿರಾತಕನನ್ನು ಬಿಟ್ಟು ಅಮಾಯಕರ ಬೆನ್ನತ್ತಿದ ನೀವು ಗೃಹಮಂತ್ರಿ ಹುದ್ದೆಗೆ ನಾಲಾಯಕ್ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಅಸಲಿ ದಲಿತರಿಗೆ ಅಧಿಕಾರ ಕೊಡಿ:** "ಸಿದ್ಧಾರ್ಥ, ಡಾ.ಅಂಬೇಡ್ಕರ್ ಹೆಸರಿನಲ್ಲಿ ಲೂಟಿ ಮೇಲೆ ಲೂಟಿ ಮಾಡಿದ 'ಬಲಿತ ದಲಿತ'ನೇ, ನಿಮ್ಮ ಮೀಸಲು ಕ್ಷೇತ್ರವನ್ನು ದುರ್ಬಲ ದಲಿತನಿಗೆ ಬಿಟ್ಟುಕೊಟ್ಟು ಸಾಮಾನ್ಯ ಕ್ಷೇತ್ರದಿಂದ ಗೆದ್ದು ಬನ್ನಿ. ನಿಮಗೆ, ನಿಮ್ಮಪ್ಪನಿಗೆ ಇನ್ನೆಷ್ಟು ವರ್ಷ ಮೀಸಲು ಕ್ಷೇತ್ರಗಳು ಬೇಕು? ಇನ್ನೆಷ್ಟು ವರ್ಷ ದಲಿತರ ಹೆಸರಿನಲ್ಲಿ ಅಧಿಕಾರ? ಅಸಲಿ ದಲಿತರಿಗೆ ಅಧಿಕಾರ ಕೊಡಿ. ನನ್ನ ಹುಡುಗರನ್ನು ರಕ್ಷಿಸಿಕೊಳ್ಳುವುದು ನನಗೆ ಗೊತ್ತು. ಓಡುವುದು ನನ್ನ ಜಾಯಮಾನವಲ್ಲ. ನಾನು ಕೆಪಿಎಸ್ಸಿ, ಸ್ಟಿಂಗ್ ವಿಷಯ ಪ್ರಸ್ತಾಪಿಸಿದ ಕೂಡಲೇ ಎಷ್ಟು ಕಡೆ ರನ್ನಿಂಗ್ ರೇಸ್ ಮಾಡಿದ್ದೀರಿ ಎಂದು ನನಗೆ ಗೊತ್ತಿದೆ. ಅಂಗಲಾಚುವವನಲ್ಲ ಈ ಕುಮಾರಸ್ವಾಮಿ. ನಿಮ್ಮ ಪೊಲೀಸ್ ಕಮಿಷನರ್ ಬಳಿ ಏನು ಹೇಳಿದ್ದೇನೆ ಎಂಬುದನ್ನು ತಿಳಿದುಕೊಳ್ಳಿ " ಎಂದಿದ್ದಾರೆ.

**ಸ್ಟಿಂಗ್ ಸಾಮ್ರಾಟನ ಸಿಂಡಿಕೇಟ್‌ನಲ್ಲಿ ಒಂದು ಭಾಗ:** " ನಿಮ್ಮ ಪಕ್ಷದ ಹಿರಿಯ ನಾಯಕನನ್ನು ಸ್ಟಿಂಗ್ ಮಾಡಿದ ನಟೋರಿಯಸ್ ಸ್ಟಿಂಗ್'ಪಿನ್ ನನ್ನೇ ಬಂಧಿಸಲು ಯೋಗ್ಯತೆ ಇಲ್ಲ ನಿಮಗೆ. ಅವನು ಬಂದು ನಿಮ್ಮ ಡಿಸಿಪಿ ಮುಂದೆ ಕಾಲು ಮೇಲೆ ಕಾಲು ಹಾಕಿ ಕೂರುತ್ತಾನೆ, ನಿಮ್ಮ ಇಲಾಖೆಯ ನಿವೃತ್ತ ಖಕಖ ಅಧಿಕಾರಿಗೆ ಕೊಲೆ ಬೆದರಿಕೆ ಹಾಕ್ತಾನೆ, ನಿಮ್ಮ ಪೊಲೀಸ್ ಅಧಿಕಾರಿಗಳ ಸ್ಟಿಂಗ್ ಮಾಡಿ ಹಫ್ತಾ ವಸೂಲಿ ಮಾಡ್ತಾನೆ. ಅವನನ್ನು ಹಿಡಿದು ಸೆದೆಬಡಿಯುವುದು ಬಿಟ್ಟು ಪುಂಗಿ ಬಿಡ್ತಾ ಇದ್ದೀರಿ. ಸ್ಟಿಂಗ್ ಸಾಮ್ರಾಟನ ಸಿಂಡಿಕೇಟ್ ನಲ್ಲಿ ನೀವು ಒಂದು ಭಾಗ ಎಂಬುದು ನನಗೆ ಗ್ಯಾರಂಟಿ ಆಗಿದೆ " ಎಂದು ಆರೋಪಿಸಿದ್ದಾರೆ.

## ಪೊಲೀಸ್ ಕಮಿಷನರ್ ಕಚೇರಿ ಮುಂದೆ ಕೇಂದ್ರ ಸಚಿವ ಕುಮಾರಸ್ವಾಮಿ ಧರಣಿ

**ಬೆಂಗಳೂರು:** ರಾಜ್ಯ ರಾಜಕೀಯದಲ್ಲಿ ತೀವ್ರ ಸಂಚಲನ ಸೃಷ್ಟಿಸಿರುವ 'ಸ್ಟಿಂಗ್' ಆಪರೇಷನ್ ಗೆ ಸಂಬಂಧಿಸಿದಂತೆ ಜೆಡಿ(ಎಸ್) ಕಾರ್ಯಕರ್ತರನ್ನು ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಗುರುವಾರ ಆರೋಪಿಸಿದ್ದಾರೆ.

ಈ ಸಂಬಂಧ ಇಂದು ಬೆಂಗಳೂರು ಪೊಲೀಸ್ ಕಮಿಷನರ್ ಕಚೇರಿ ಮುಂದೆ ಧರಣಿ ನಡೆಸಿದ ಕುಮಾರಸ್ವಾಮಿ ಅವರು, ಸ್ಟಿಂಗ್ ಆಪರೇಷನ್ ರೂವಾರಿಯನ್ನು ತಕ್ಷಣವೇ ಬಂಧಿಸಬೇಕು ಎಂದು ಆಗ್ರಹಿಸಿದರು. ಎರಡು ದಿನಗಳಲ್ಲಿ ಮುಖ್ಯ ಆರೋಪಿ ಬಂಧನ ಆಗದಿದ್ರೆ, ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಕೆಯನ್ನೂ ನೀಡಿದ್ದಾರೆ.

ತಮ್ಮ ಪಕ್ಷದ ಕಾರ್ಯಕರ್ತನೊಬ್ಬನನ್ನು ಯಾವುದೇ ಮುನ್ಸೂಚನೆ ನೀಡದೆ ವಿಚಾರಣೆಗೆಂದು ಕರೆದೊಯ್ದು, ಹಲವು ಗಂಟೆಗಳ ಕಾಲ ಅಜ್ಞಾತ ಸ್ಥಳದಲ್ಲಿ ಇರಿಸಲಾಗಿತ್ತು ಎಂದು ಅವರು ದೂರಿದ್ದಾರೆ. ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು, ಜೆಡಿಎಸ್ ಸೋಷಿಯಲ್ ಮೀಡಿಯಾ ಹುಡುಗರ ಬೆನ್ನು ಬಿದ್ದಿದ್ದಾರೆ. ಮಾಜಿ ಸಿಎಂ ಸಿದ್ದರಾಮಯ್ಯ ದೂರಿನನ್ವಯ ಜೆಡಿಎಸ್ ಐಟಿ ಸೆಲ್‌ನ ಶಂಕರ್, ಮೋಹನ್‌ರನ್ನ ವಶ ವಶಕ್ಕೆ ಪಡೆಯಲಾಗಿದೆ. ಪೊಲೀಸರ ವರ್ತನೆಗೆ ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದು, ಪೊಲೀಸ್ ಕಮಿಷನರ್ ಕಚೇರಿ ಮುಂದೆ ಧರಣಿ ನಡೆಸಿ, ಪೊಲೀಸರ ಕ್ರಮವನ್ನು ಖಂಡಿಸಿದರು.

ಪೊಲೀಸ್ ಆಯುಕ್ತರ ಕಚೇರಿಯ ಮೆಟ್ಟಿಲುಗಳ ಮೇಲೆಯೇ ಕುಳಿತು ಕುಮಾರಸ್ವಾಮಿ ಧರಣಿ ನಡೆಸಿದರು. ಈ ವೇಳೆ ನಗರ ಪೊಲೀಸ್ ಆಯುಕ್ತರು, ಕೇಂದ್ರ ಸಚಿವರ ಮನವೊಲಿಸಲು ಪ್ರಯತ್ನಿಸಿದ್ದರು. ಈ ವೇಳೆ ಕುಮಾರಸ್ವಾಮಿ ನನ್ನ ವಿರುದ್ಧವೇ ತನಿಖೆ ಮಾಡಿ, ಸತ್ಯ ಹೊರಗೆ ಬರಬೇಕು ಎಂದು ಪಟ್ಟು ಹಿಡಿದರು. ಈ ವೇಳೆ ಪೊಲೀಸ್ ಆಯುಕ್ತರು, ಪ್ರಾಮಾಣಿಕವಾಗಿ ತನಿಖೆ ಮಾಡ್ತೀವಿ ಎಂದು ಭರವಸೆ ನೀಡಿದ ನಂತರ ಕುಮಾರಸ್ವಾಮಿ ಅವರು ಧರಣಿ ಕೈಬಿಟ್ಟರು.

ಇದಕ್ಕೂ ಮುನ್ನ, ಶೇಷಾದ್ರಿಪುರಂನಲ್ಲಿರುವ ಜೆಡಿ(ಎಸ್) ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕುಮಾರಸ್ವಾಮಿ, ತನಿಖೆ ನಡೆಸಿದ ರೀತಿಯನ್ನು ಪ್ರಶ್ನಿಸಿದರು. ಅಲ್ಲದೆ, ಈ ಪ್ರಕರಣದಲ್ಲಿ ತಮ್ಮನ್ನು ಸಿಲುಕಿಸುವ ಪ್ರಯತ್ನಗಳು ನಡೆಯುತ್ತಿವೆ ಎಂದು ಆರೋಪಿಸಿದರು.



## ನಿಯಂತ್ರಣ ತಪ್ಪಿ ಜಮೀನಿಗಿಳಿದ ಖಾಸಗಿ ಬಸ್ ಬಾಲಕಿ ಸಾವು, 16 ಮಂದಿಗೆ ಗಾಯ

**ಹುಬ್ಬಳ್ಳಿ:** ಖಾಸಗಿ ಬಸ್ಸೊಂದು ನಿಯಂತ್ರಣ ತಪ್ಪಿ ರಸ್ತೆ ಬದಿಯ ಜಮೀನಿಗೆ ನುಗ್ಗಿದ ಪರಿಣಾಮ ಓರ್ವ ಬಾಲಕಿ ಸಾವನ್ನಪ್ಪಿ ಕನಿಷ್ಠ 16 ಮಂದಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ಹುಬ್ಬಳ್ಳಿಯ ಬಳಿ ಗುರುವಾರ ಮುಂಜಾನೆ ನಡೆದಿದೆ.

ಮುಂಬೈನಿಂದ ಬೆಂಗಳೂರಿಗೆ ತೆರಳುತ್ತಿದ್ದ ಬಸ್, 'ಚಬ್ಬಿ ಕ್ರಾಸ್' ದಾಟಿದ ಸ್ವಲ್ಪ ಸಮಯದ ನಂತರ ಈ ಅಪಘಾತ ಸಂಭವಿಸಿದೆ. ಬೆಳಗಿನ ಜಾವ ಸುಮಾರು 3 ಗಂಟೆಗೆ ಅಪಘಾತವಾಗಿದೆ ಎನ್ನಲಾಗಿದೆ. ಗಾಯಗೊಂಡವರಲ್ಲಿ ಚಾಲಕ ಕೂಡ ಸೇರಿದ್ದಾರೆ.

ಚಾಲಕನ ನಿಯಂತ್ರಣ ತಪ್ಪಿದ್ದರಿಂದ ಬಸ್ ರಸ್ತೆಯಿಂದ ಪಕ್ಕಕ್ಕೆ ಸರಿದು ಜಮೀನಿನೊಳಗೆ ನುಗ್ಗಿದೆ ಎಂದು ಪೊಲೀಸರು ಹೇಳಿದ್ದಾರೆ.

ಅಪಘಾತದ ತೀವ್ರತೆಗೆ ಚಾಲಕನ ಕಾಲು ಬಸ್ಸಿನೊಳಗೆ ಸಿಲುಕಿಕೊಂಡಿತ್ತು. ಇದರಿಂದ ತೀವ್ರ ನೋವಿನಲ್ಲಿದ್ದ ಚಾಲಕ, ಹೊರಬರಲು ಪರದಾಡುತ್ತಿದ್ದರು ಎಂದು ತಿಳಿದುಬಂದಿದೆ. ಸ್ಥಳಕ್ಕೆ ಧಾವಿಸಿದ ಪೊಲೀಸರು ಹಾಗೂ ಅಗ್ನಿಶಾಮಕ ಮತ್ತು ತುರ್ತು ಸೇವಾ ಸಿಬ್ಬಂದಿ, ಕಾರ್ಯಾಚರಣೆ ನಡೆಸಿ ಚಾಲಕರನ್ನು ಹೊರತೆಗೆದರು. ಅಪಘಾತ ಸಂಭವಿಸಿದಾಗ ಬಸ್ಸಿನಲ್ಲಿ ಒಟ್ಟು 26 ಪ್ರಯಾಣಿಕರಿದ್ದರು.

ಈ ಪೈಕಿ 8 ವರ್ಷದ ಓರ್ವ ಬಾಲಕಿ ಸಾವನ್ನಪ್ಪಿ, ಚಾಲಕ ಸೇರಿದಂತೆ ಒಟ್ಟು 16 ಮಂದಿ ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅಪಘಾತಕ್ಕೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ, ಈ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ.

ಗಾಯಾಳುಗಳನ್ನು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ತಲೆಗೆ ಗಂಭೀರ ಗಾಯವಾಗಿದ್ದ ಎಂಟು ವರ್ಷದ ಬಾಲಕಿ ಆಸ್ಪತ್ರೆಗೆ ತಲುಪುವಷ್ಟರಲ್ಲಿ ಮೃತಪಟ್ಟಿದ್ದಾಳೆ ಎಂದು ಕಿಮ್ಸ್ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಈಶ್ವರ ಹಸಬಿ ತಿಳಿಸಿದ್ದಾರೆ.

ಕೆಲ ಪ್ರಯಾಣಿಕರು ಸಣ್ಣಪುಟ್ಟ ಗಾಯಗಳಿಗೆ ಚಿಕಿತ್ಸೆ ಪಡೆದು ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ಉಳಿದ ಗಾಯಾಳುಗಳಿಗೆ ಚಿಕಿತ್ಸೆ ಮುಂದುವರಿದಿದೆ. ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿದ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಗಾಯಾಳುಗಳ ಆರೋಗ್ಯದ ಬಗ್ಗೆ ಮಾಹಿತಿ ಪಡೆದರು.

## ಹಾಸನಾಂಬೆ ಹೂವಿನ ಅಲಂಕಾರಕ್ಕೆ 90 ಲಕ್ಷ, ಡ್ಯಾನ್ಸ್ ಕಾರ್ಯಕ್ರಮಕ್ಕೆ 80 ಲಕ್ಷ ರೂ. ಖರ್ಚು

ಹಾಸನ: ಶಾಂತಿಗ್ರಾಮ ಮತ್ತು ಸುತ್ತಲಿನ ಪ್ರದೇಶಗಳ ಕೆರೆಗಳಿಗೆ ನೀರು ತುಂಬಿಸುವ ಉದ್ದೇಶದಿಂದ ಕೈಗೆತ್ತಿಕೊಂಡಿರುವ ನೀರಾವರಿ ಯೋಜನೆಗಳು 8 ವರ್ಷಗಳಾದರೂ ಪೂರ್ಣಗೊಂಡಿಲ್ಲ ಎಂದು ಶಾಸಕ ಎಚ್.ಡಿ. ರೇವಣ್ಣ ಅಸಮಾಧಾನ ವ್ಯಕ್ತಪಡಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಹಲವು



ವರ್ಷಗಳಾದರೂ, ರೈತರಿಗೆ ನಿರೀಕ್ಷಿತ ಪ್ರಯೋಜನ ದೊರೆಯುತ್ತಿಲ್ಲ. ಯೋಜನೆಯಡಿ ಮೂಲಸೌಕರ್ಯ ಸಿದ್ಧವಾಗಿದ್ದರೂ, ವಿದ್ಯುತ್ ಸಂಪರ್ಕ ಕಲ್ಪಿಸಲು ಅಗತ್ಯವಿರುವ 1.06 ಕೋಟಿ ಪಾವತಿಸದೇ ಇರುವುದರಿಂದ ನೀರು ಹರಿಸಲು ಸಾಧ್ಯವಾಗುತ್ತಿಲ್ಲ. ಕೂಡಲೇ ಹಣ ಬಿಡುಗಡೆ ಮಾಡಿ ಕೆರೆಗಳಿಗೆ ನೀರು ಹರಿಸಬೇಕು' ಎಂದು ಆಗ್ರಹಿಸಿದರು.

ಹಾಸನಾಂಬ ದೇವಿಯ ಜಾತ್ರಾ ಮಹೋತ್ಸವದ ಖರ್ಚು–ವೆಚ್ಚದ ವಿವರಗಳನ್ನು ಗಮನಿಸಿದಾಗ ಬೆಚ್ಚಿಬಿದ್ದಿದ್ದೇನೆ. ಜಾತ್ರೆಯ ಹೆಸರಿನಲ್ಲಿ ಹತ್ತಾರು ಕೋಟಿ ರೂಪಾಯಿ ಖರ್ಚು ಮಾಡಲಾಗುತ್ತಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಇಲ್ಲವಾಗಿದೆ ಎಂದು ಎಚ್.ಡಿ. ರೇವಣ್ಣ ಆರೋಪಿಸಿದರು.

ದೇವಸ್ಥಾನದ ಟೆಂಡರ್‌ಗಳನ್ನು ಪದೇ ಪದೇ ಒಬ್ಬರಿಗೇ ನೀಡಲಾಗುತ್ತಿದೆ. ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಲು ಆಸಕ್ತಿ ತೋರುವ ಇತರರಿಗೆ ಬೆದರಿಕೆ ಹಾಕಿ, ಸ್ಪರ್ಧೆಯಿಂದ ಹಿಂದೆ ಸರಿಯುವಂತೆ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ಜಿಲ್ಲಾಡಳಿತವು ಗುತ್ತಿಗೆದಾರರನ್ನು ಕೂರಿಸಿಕೊಂಡು ಟೆಂಡರ್ ಕರೆಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಬೆಳವಣಿಗೆಗಳ ಕುರಿತು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ತನಿಖೆ ನಡೆಸುತ್ತಾರೆಯೇ ಎಂದು ಪ್ರಶ್ನಿಸಿದ ಅವರು, ಟೆಂಡರ್ ಹಂಚಿಕೆ ಮತ್ತು ಜಾತ್ರಾ ಮಹೋತ್ಸವದ ವೆಚ್ಚದ ಬಗ್ಗೆ ಸಮಗ್ರ ತನಿಖೆಯಾಗಬೇಕು ಎಂದು ಒತ್ತಾಯಿಸಿದರು.

ಜಾತ್ರಾ ಮಹೋತ್ಸವವು ಭಕ್ತಿ ಮತ್ತು ಧಾರ್ಮಿಕ ಶ್ರದ್ಧೆಯ ಪ್ರತೀಕವಾಗಬೇಕೇ ಹೊರತು, ಹಣದ ದುರುಪಯೋಗದ ಆರೋಪಗಳಿಗೆ ಅವಕಾಶ ನೀಡುವ ಕಾರ್ಯಕ್ರಮ ಆಗಬಾರದು. ಜಾತ್ರೆಯ ಹೆಸರಿನಲ್ಲಿ ಹಣ ದುರುಪಯೋಗ ಆಗುತ್ತಿದೆ ಎಂಬ ಆರೋಪಗಳಿಗೆ ಜಿಲ್ಲಾಡಳಿತ ಸ್ಪಷ್ಟನೆ ನೀಡಬೇಕು ಎಂದು ಒತ್ತಾಯಿಸಿದರು.

ಹೂವಿನ ಅಲಂಕಾರಕ್ಕೆ 90 ಲಕ್ಷ ರೂ., ಡ್ಯಾನ್ಸ್ ಕಾರ್ಯಕ್ರಮಕ್ಕೆ 80 ಲಕ್ಷ ರೂ. ಹಾಗೂ ಕಂಟ್ರೋಲ್ ರೂಂಗೆ 50 ಲಕ್ಷ ರೂ. ಖರ್ಚು ಮಾಡುತ್ತಿರುವುದನ್ನ ಪ್ರಶ್ನಿಸಿದ್ದಾರೆ. ಸಿಎಂ ಮತ್ತು ಡಿಸಿಎಂ ಬಂದು ಹೋಗಲು 4 ಲಕ್ಷ ರೂ. ಖರ್ಚು ಮಾಡಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ಅಕ್ಟೋಬರ್ 29ರಿಂದ ನವೆಂಬರ್ 11ರ ವರೆಗೆ ಹಾಸನಾಂಬ ಜಾತ್ರಾ ಮಹೋತ್ಸವ ನಡೆಯಲಿದೆ.

## 'ಫ್ಲೈ ದಿ ಟ್ರೈಕ್ಲಾರ್' ಕಾರ್ಯಕ್ರಮಕ್ಕೆ ತಡೆ ನೀಡಲು ದೆಹಲಿ ಹೈಕೋರ್ಟ್ ನಿರಾಕರಣೆ

**ದೆಹಲಿ:** ಅಕ್ಟೋಬರ್ 16 ರಂದು ಕನ್ನಾಟ್ ಪ್ಲೇಸ್ ಸೆಂಟ್ರಲ್ ಪಾರ್ಕ್‌ನಲ್ಲಿ ನಿಗದಿಯಾಗಿದ್ದ ಕಾಕ್ರೋಚ್ ಜನತಾ ಪಕ್ಷ 'ಫ್ಲೈ ದಿ ಟ್ರೈಕ್ಲಾರ್' ಕಾರ್ಯಕ್ರಮಕ್ಕೆ ತಡೆ ನೀಡಲು ದೆಹಲಿ ಹೈಕೋರ್ಟ್ ನಿರಾಕರಿಸಿದೆ. ಅದರಂತೆ ನಾಳೆ ಸಂಜೆ 5 ಗಂಟೆಗೆ ಸಿಜೆಪಿಯ ತಿರಂಗಾ ಯಾತ್ರೆ ನಡೆಯಲಿದೆ. ನಿನ್ನೆ ಕನ್ನಾಟ್ ಪ್ಲೇಸ್‌ನಲ್ಲಿ ಸಿಜೆಪಿಯ ಪ್ರತಿಭಟನೆಯ ವಿರುದ್ಧ ಅರ್ಜಿ ಸಲ್ಲಿಸಲಾಗಿತ್ತು. ನಾಳೆ ಕನ್ನಾಟ್ ಪ್ಲೇಸ್‌ನಲ್ಲಿ ಸಿಜೆಪಿ ಪ್ರತಿಭಟನೆಯನ್ನು ನಿಯಂತ್ರಿಸಲು ಮತ್ತು ಹತೋಟಿಯಲ್ಲಿಡಲು ಸಾಧ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂಬ ದೆಹಲಿ ಪೊಲೀಸರ ಭರವಸೆಯನ್ನು ಕೋರ್ಟ್ ದಾಖಲಿಸಿಕೊಂಡಿದೆ.

ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ನಿತಿನ್ ವಾಸುದೇವ ಸಾಂಬ್ರೆ ಮತ್ತು ನ್ಯಾಯಮೂರ್ತಿ ಸಂಜಯ್ ಶರ್ಮಾ ಅವರಿದ್ದ ಪೀಠವು, ಕನ್ನಾಟ್ ಪ್ಲೇಸ್‌ನ ವ್ಯಾಪಾರಿಯೊಬ್ಬರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿತು. ಪ್ರತಿಭಟನೆಗಳನ್ನು ಸುಪ್ರೀಂ ಕೋರ್ಟ್ ರೂಪಿಸಿರುವ ಅಸ್ತಿತ್ವದಲ್ಲಿರುವ ಕಾನೂನಿನ ಪ್ರಕಾರ ನಿಯಂತ್ರಿಸುವಂತೆ ಪೊಲೀಸರಿಗೆ ನಿರ್ದೇಶನ ನೀಡಬೇಕೆಂದು ಅರ್ಜಿದಾರರು ಕೋರಿದ್ದರು. ಹಬ್ಬದ ಋತುವಿನಲ್ಲಿ ದೆಹಲಿಯ ಮಧ್ಯಭಾಗದಲ್ಲಿ ನಡೆಯುತ್ತಿರುವ ಪ್ರತಿಭಟನೆಗಳಿಂದಾಗಿ ಅಂಗಡಿಗಳನ್ನು ಮುಚ್ಚಿದರೆ ಆರ್ಥಿಕ ನಷ್ಟವಾಗುತ್ತದೆ. ವ್ಯಾಪಾರಿಗಳು ಮತ್ತು ಮಾರಾಟಗಾರರು "ಬೀದಿ ಪಾಲಾಗುತ್ತಾರೆ" ಎಂದು ಅರ್ಜಿದಾರರ ಪರ ಹಿರಿಯ ವಕೀಲರು ನ್ಯಾಯಾಲಯಕ್ಕೆ ತಿಳಿಸಿದರು.

ಹೆಚ್ಚುವರಿ ಸಾಲಿಸಿಟರ್ ಜನರಲ್ ಚೇತನ್ ಶರ್ಮಾ ಅವರು, 'ಕಾಕ್ರೋಚ್ ಜನತಾ ಪಾರ್ಟಿ'ಯ (ಅಎಕ) ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮಕೈಗೊಳ್ಳಲಾಗಿದೆ ಎಂದು ತಿಳಿಸಿದ್ದು ಅರ್ಜಿದಾರರ ಆತಂಕವನ್ನು ಪರಿಹರಿಸಲಾಗುವುದು ಎಂದು ಭರವಸೆ ನೀಡಿದರು. ಹೀಗಾಗಿ ಪ್ರಕರಣ ಮುಂದಿನ ವಿಚಾರಣೆಯನ್ನು ನವೆಂಬರ್ 3ಕ್ಕೆ ಮುಂದೂಡಿದರು.

ಆಮ್ ಆದ್ಮಿ ಪಕ್ಷವು ನಾಳೆ ಸಿಜೆಪಿಯ ಕಾರ್ಯಕ್ರಮವನ್ನು ಬೆಂಬಲಿಸಿದೆ. ನಾಳೆ ಕನ್ನಾಟ್ ಪ್ಲೇಸ್‌ನಲ್ಲಿ ಸಿಜೆಪಿ ತ್ರಿವರ್ಣ ಧ್ವಜ ಮೆರವಣಿಗೆ ನಡೆಸುವುದಾಗಿ ಎಎಪಿ ನಾಯಕ ಮತ್ತು ದೆಹಲಿಯ ಮಾಜಿ ಸಚಿವ ಸೌರಭ್ ಭಾರದ್ವಾಜ್ ಹೇಳಿದ್ದಾರೆ. ಆದ್ದರಿಂದ, ನಾವು ಇಂದು ನಮ್ಮ ಪ್ರತಿಭಟನೆಯನ್ನು ರದ್ದುಗೊಳಿಸಿ ನಾಳೆಯ ಸಿಜೆಪಿ ಕಾರ್ಯಕ್ರಮದೊಂದಿಗೆ ವಿಲೀನಗೊಳಿಸಿದ್ದೇವೆ. ತ್ರಿವರ್ಣ ಧ್ವಜ ಹಾರಿಸುವುದು ನಾಗರಿಕರ ಹಕ್ಕು ಮತ್ತು ಸವಲತ್ತು ಎಂದು ನಾವು ಎಲ್ಲರಿಗೂ ಹೇಳಿದ್ದೇವೆ. ಯಾವುದೇ ಸರ್ಕಾರ ಅಥವಾ ಪೊಲೀಸರು ದೇಶದ ಯುವಕರು ತ್ರಿವರ್ಣ ಧ್ವಜ ಹಾರಿಸುವುದನ್ನು ತಡೆಯಲು ಸಾಧ್ಯವಿಲ್ಲ. ಸಿಜೆಪಿ ನಾಯಕರಾದ ಸೌರವ್ ದಾಸ್ ಮತ್ತು ಅಶುತೋಷ್ ರಂಕಾ ಬಂಧನದ ವಿರುದ್ಧ ಪ್ರತಿಭಟಿಸುವ ಸಲುವಾಗಿ ಸಿಜೆಪಿ ಮುಖ್ಯಸ್ಥ ಅಭಿಜಿತ್ ದೀಪ್ಕೆ ನಿನ್ನೆ ಕರೆಯನ್ನು ನೀಡಿದರು. ತ್ರಿವರ್ಣ ಧ್ವಜವನ್ನು ಹೊತ್ತುಕೊಳ್ಳಲು ಜನರು ಸೇರಬೇಕೆಂದು ಒತ್ತಾಯಿಸಿದರು.

ಉತ್ತರ ಕರ್ನಾಟಕ ಸುದ್ದಿಗಳು
ಕನ್ನಡ ದಿನ ಪತ್ರಿಕೆ
UTTARA KARNATKA SUDDIGALU
Kannada Daily Morning


ಸಹನಾ ಹಿರೇಮಠ್ ಗಂಗಾವತಿ


ರಾಧಕ್ಕ, ವಿದ್ಯಾ, ಅರಾಧ್ಯ ಶಿಗ್ಗಿ


ಶ್ರೀ ಬಸವೇಶ್ವರ ಮಹಿಳಾ ಮಂಡಲ ಶಿವಾನಂದ ನಗರ ರೋಣ


ಮಂಜುಳಾ ,ಪ್ರೇಮಾ ಶಿಗ್ಗಿ


ಸುಮಾ ಹಿರೇಮಠ


ಲತಾ ಸಂಗಡಿಗರು ಹಿರೇಜಂತಕಲ್, ಗಂಗಾವತಿ


ಸೌಭಾಗ್ಯ ಗಂಗಾವತಿ


ಶ್ರೀಶಾ ಪ್ರಭನ್ನವರ ಬಾಗಲಕೋಟೆ


ಯಲಿಗಾರ ಕುಟುಂಬ ವರ್ಗದವರು ಸಾ ಶಿಗ್ಗಿ


ಸಾವಿತ್ರಿ, ಗಾಯತ್ರಿ,ಗೀತಾ. ಪ್ರತಿಭಾ ಅಳವಂಡಿ–ಕಂಪ್ಲಿ (ಕೊಪ್ಪಳ)


ಮಂಜುಳಾ, ಸುಜಾತಾ, ಆಶಾ, ತೇಜಸ್ವಿನಿ , ಮತ್ತು ಮಕ್ಕಳು.ಶಿಗ್ಗಿ


ಶಕುಂತಲಾ ಬೆಂಗಳೂರು


ಎಂ.ಟಿ. ಅವಧೂತ, ಗಜೇಂದ್ರಗಡ


ನಿಮಿಷಾಂಬ ನಾಟ್ಯ ಅಕಾಡೆಮಿ ವಿದ್ಯಾರ್ಥಿಗಳು ಗದಗ


ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಿಬ್ಬಂದಿ ರೋಣ


ಜಿಲ್ಲಾ ಆಸ್ಪತ್ರೆ ಬಾಗಲಕೋಟ ಶೈಲಜಾ ಪಾಟೀಲ್ ಗೆಳತಿಯರ ಬಳಗ


ಹನುಮಾನ ಮಹಿಳಾ ಗುಂಪು ಶಿವಬಸವ ನಗರ ಗದಗ


ಕನ್ನಡತಿ ಭಾಗ್ಯ, ಶಲವಡಿ


ಸುಮಂಗಲಾ ಗದಗ


ಜಯಶ್ರೀ ಸಂಗಡಿಗರು ರೋಣ


ಕಮ್ಮವಾರಿ ಶಿಕ್ಷಣ ಸಂಸ್ಥೆ ರೆಡ್ಡಿ ವೀರಣ್ಣ ಶಾಲೆ ಶಿಕ್ಷಕ ವೃಂದ ನವನಗರ ಕಾರಟಗಿ

UTTARA KARNATKA SUDDIGALU
Kannada Daily Morning

ಉತ್ತರ ಕರ್ನಾಟಕ ಸುದ್ದಿಗಳು
ಕನ್ನಡ ದಿನ ಪತ್ರಿಕೆ

ಶುಕ್ರವಾರ 16 ಅಕ್ಟೋಬರ್ 2026
16 OCTOBER 2026



# ಅರ್ಥಪೂರ್ಣ ಹಾಗೂ ವ್ಯವಸ್ಥಿತ ಆಚರಣೆಗೆ ಕ್ರಮ ವಹಿಸಿ: ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್

**ಗದಗ:** ಜಿಲ್ಲೆಯಲ್ಲಿ ನವೆಂಬರ್ 1 ರಂದು ಕನ್ನಡ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಹಾಗೂ ವ್ಯವಸ್ಥಿತವಾಗಿ ಸಂಭ್ರಮದಿಂದ ಆಚರಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಕನ್ನಡ ರಾಜ್ಯೋತ್ಸವ ಅಚರಣೆಯ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು. ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಯಾವುದೇ ಲೋಪಗಳಿಲ್ಲದಂತೆ ಆಚರಿಸಲು ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು ಸಮಿತಿಯವರು ತಮಗೆ ವಹಿಸಿದ ಕೆಲಸವನ್ನು ನಿರ್ವಹಿಸಿ ರಾಜ್ಯೋತ್ಸವ ಕಾರ್ಯಕ್ರಮ ಯಶಸ್ವಿಗೆ ಶ್ರಮಿಸಬೇಕೆಂದು ಸೂಚಿಸಿದರು.

ಪ್ರತಿ ವರ್ಷದಂತೆ ಈ ವರ್ಷವೂ ಸಹ ಕನ್ನಡ ರಾಜ್ಯೋತ್ಸವದ ದಿನದ ಹಿಂದಿನ ದಿನ ಹಾಗೂ ಕನ್ನಡ ರಾಜ್ಯೋತ್ಸವದ ದಿನ ಎರಡು ದಿನ ಸರ್ಕಾರಿ ಕಚೇರಿ ಹಾಗೂ ನಗರದ ವಿವಿಧ ವೃತ್ತಗಳಲ್ಲಿ ಸ್ವಚ್ಛತೆಯೊಂದಿಗೆ ವಿದ್ಯುತ್ ದೀಪಾಲಂಕಾರಕ್ಕೆ ಕ್ರಮ ಕೈಗೊಳ್ಳಬೇಕು ಎಂದರು.

ಕಾರ್ಯಕ್ರಮದ ಸ್ಥಳದ ಸ್ವಚ್ಛತೆಗೆ ಆದ್ಯತೆ ವಹಿಸಬೇಕು. ಶಿಷ್ಟಾಚಾರದನ್ವಯ ಆಸನದ ವ್ಯವಸ್ಥೆ, ವೇದಿಕೆ ಅಲಂಕಾರ, ಸನ್ಮಾನ ವ್ಯವಸ್ಥೆ ಕುರಿತಂತೆ ಯಾವುದೇ ಲೋಪದೋಷಗಳಾಗದಂತೆ ಅಚ್ಚುಕಟ್ಟಾಗಿ ನಿರ್ವಹಿಸಬೇಕು.

ಅಂದು ಬೆಳಿಗ್ಗೆ 7.30 ಗಂಟೆಗೆ ಗದಗ ಬೆಟಗೇರಿ ನಗರಸಭೆ ಪದವಿ ಪೂರ್ವ ಕಾಲೇಜ ಆವರಣದಿಂದ ಕಲಾತಂಡಗಳ ಜೊತೆ-



ಗೆ ತಾಯಿ ಭುವನೇಶ್ವರಿಯ ಮೆರವಣಿಗೆಯು ವಿವಿಧ ವೃತ್ತಗಳಲ್ಲಿ ಸಂಚರಿಸಿ ನಂತರ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ತಲುಪಲಿದೆ. ಬೆ.9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ನೆರವೇರಿಸುವರು. ಕಾರ್ಯಕ್ರಮಕ್ಕೆ ಎಲ್ಲ ಅಧಿಕಾರಿ ಹಾಗೂ ಸಿಬ್ಬಂದಿಗಳು ಸಮಯಕ್ಕೆ ಸರಿಯಾಗಿ ಕಡ್ಡಾಯವಾಗಿ ಹಾಜರಿರಬೇಕು ಎಂದರು.

ಪೊಲೀಸ್ ಪಡೆ, ಹೋಮಗಾರ್ಡ, ಭಾರತ ಸೇವಾ ದಳಗಳಿಂದ ಪರೇಡ್, ಪಥ ಸಂಚಲನ ಜರುಗಲಿವೆ. ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ವಿವಿಧ ಇಲಾಖೆಗಳ ಸ್ತಬ್ದ ಚಿತ್ರಗಳ ಪ್ರದರ್ಶನ ಅಚ್ಚುಕಟ್ಟಾಗಿ ನಡೆಯುವಂತೆ ಕ್ರಮ ವಹಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳು, ಸಂಘಸಂಸ್ಥೆಯವರು ಈ ಕಾರ್ಯಕ್ರಮದಲ್ಲಿ ಆಸಕ್ತಿಯಿಂದ ಭಾಗವಹಿಸುವಂತೆ ಪ್ರೇರೇಪಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಅವರು ಮಾತನಾಡಿ ಶಿಷ್ಟಾಚಾರದನ್ವಯ ಅತಿಥಿ ಗಣ್ಯರ ಅಹ್ವಾನ ಹಾಗೂ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ವಿವಿಧ ರಂಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಪರಿಣಿತರಿಗೆ ಇದೇ ಸಂದರ್ಭದಲ್ಲಿ ಸನ್ಮಾನಿಸುವ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುಕುಲ್ ಜೈನ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಉಪವಿಬಾಗಾಧಿಕಾರಿ ಗಂಗಪ್ಪ ಎಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಕಾರ್ಮಿಕ ಇಲಾಖೆ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಯುವಜನ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಬಸವರಾಜ ಬಳ್ಳಾರಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ.ಮಸನಾಯಕ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರುಡಿ, ಡಿಡಿಎಲ್‌ಆರ್ ರುದ್ರನಗೌಡ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಎಂ.ಎಂ.ತುಂಬರಮಟ್ಟಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ನೀತಿ ಸಂಹಿತೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತದಲ್ಲಿ ಜಯಂತಿಯನ್ನು ಸಾಂಕೇತಿಕವಾಗಿ ಆಚರಿಸಿ : ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ

**ಗದಗ:** ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅಕ್ಟೋಬರ್ 26 ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಗೆಯಾದ ಹಿನ್ನೆಲೆಯಲ್ಲಿ ಜಯಂತಿಯನ್ನು ಸಾಂಕೇತಿಕವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಗುರುವಾರ ಅಕ್ಟೋಬರ್ (15) ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ನಿಮಿತ್ತ ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಅಕ್ಟೋಬರ್ 26 ರಂದು ಆಚರಿಸಲಾಗುವ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಬಹಳ ವಿಜೃಂಭಣೆಯಿಂದ ಅಚ್ಚುಕಟ್ಟಾಗಿ ಆಚರಣೆ ಮಾಡಬೇಕಿತ್ತು ಆದರೆ ಕರ್ನಾಟಕ ಪಶ್ಚಿಮ ಪದವೀಧರರ ಚುನಾವಣೆಯ 2026 ಚುನಾವಣೆ ಇರುವುದರಿಂದ ಜಯಂತಿಯನ್ನು ಸಾಂಕೇತಿಕವಾಗಿ ಆಚರಿಸಲಾಗುವುದು. ಚುನಾವಣಾ ನಂತರ ಸಮಾಜದಿಂದ ಅದ್ದೂರಿ ಆಚರಣೆ ಮಾಡಬಹುದು ಎಂದರು. ಸಮಾಜದ ಮುಖಂಡರು ಹಿರಿಯರು ಜಿಲ್ಲಾಡಳಿತದೊಂದಿಗೆ ಸಹಕರಿಸಬೇಕು ಎಂದರು.

ಸಮಾಜದ ಮುಖಂಡರೆಲ್ಲರೂ ಸೇರಿ ಜಿಲ್ಲಾಧಿಕಾರಿಗಳಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಸರ್ಕಲ್, ಮೂರ್ತಿ ಪ್ರತಿಷ್ಠಾಪನೆ, ಸ್ಥಳದಲ್ಲಿನ ಸ್ವಚ್ಛತೆ ಬಗ್ಗೆ ಹೇಳಿ ನಗರಸಭೆಯಿಂದ ಸ್ವಚ್ಛತೆ ಮಾಡಿಸಬೇಕು ಎಂದು ಮನವಿ ಮಾಡಿಕೊಂಡರು. ಅದಕ್ಕೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು ಇನ್ನೂ ಒಂದು ವಾರದೊಳಗಾಗಿ ವಾಲ್ಮೀಕಿ ಸಮುದಾಯದ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತ ಜಾಗವನ್ನು ಜಯಂತಿಯ ದಿನದೊಳಗಾಗಿ ಸರ್ವೆ ಮಾಡಿಸಿ ಸುತ್ತಲೂ ತಂತಿ ಬೇಲಿ ಹಾಗೂ ಸಿ.ಸಿ. ಕ್ಯಾಮರಾವನ್ನು ಅಳವಡಿಸಿ ಜಾಗವು ಕೆರೆ-ಯ ಒಳಗಡೆ ಬರುತ್ತದೆಯೋ ಅಥವಾ ಒರಗಡೆ ಬರುತ್ತದೆಯೋ ಎಂಬುದನ್ನು ಪರಿಶೀಲಿಸಲಿಕ್ಕೆ ಉಪವಿಭಾಗಾಧಿಕಾರಿಗಳಿಗೆ ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ ಸೂಚಿಸಿದರು.

ಅಳತೆ ಮಾಡುವಾಗ ವಾಲ್ಮಿಕಿ ವೃತ್ತದ ಜಾಗವು ಒಂದು ವೇಳೆ ಕೆರೆಯ ಹೊರಗಡೆ ಬಂದರೆ ಜಾಗಕ್ಕೆ ವೃತ್ತ, ಪುತ್ಥಳಿ ನಿರ್ಮಾಣಕ್ಕೆ ಅನುಮತಿ ನೀಡುತ್ತೇನೆ. ಕೆ-ರೆಯ ಒಳಗಡೆ ಬಂದರೆ ಸರ್ಕಾರಕ್ಕೆ ಪತ್ರ ಬರೆದು ವಾಲ್ಮೀಕಿ ಸರ್ಕಲ್ ಹಾಗೂ ಮೂರ್ತಿ ಪ್ರತಿಷ್ಠಾಪನೆ ಮಾಡಿಕೊಳ್ಳಲಿಕ್ಕೆ ಸಹಕರಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಭರವಸೆ ನೀಡಿದರು. ಅಲ್ಲಿ ಸಾರ್ವಜನಿಕರು ಕಸವನ್ನು ಹಾಕದಂತೆ ಕ್ರಮ ವಹಿಸಲಿಕ್ಕೆ ನಗರಸಭೆ ಪೌರಯುಕ್ತರಿಗೆ ತಿಳಿಸಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಶ್ರೀಮತಿ ಡಾ.ನಂದಾ ಹಣಬರಟ್ಟಿ, ವಿವಿಧ ಇಲಾಖೆಯ ಅಧಿಕಾರಿಗಳು, ಸಮಾಜದ ಗಣ್ಯರು, ಹಿರಿಯರು ಹಾಜರಿದ್ದರು.



## ಶಿಗ್ಲಿಯಲ್ಲಿ ಬನ್ನಿಕಟ್ಟಿ ಈಶ್ವರ ದೇವರ ಪೂಜೆ ಹಾಗೂ ಅಮೃತಾರ್ಪಣೆ ಕಾರ್ಯಕ್ರಮ

**ಲಕ್ಷ್ಮೇಶ್ವರ:** ಭೂಮಿಯ ಮೇಲೆ ಜನ್ಮತಾಳಿದ ಪ್ರತಿಯೊಂದು ಜೀವಿಯೂ ಒಂದಲ್ಲೊಂದು ದಿನ ಮಣ್ಣಿನಲ್ಲಿ ಲೀನವಾಗುವುದು ನಿಶ್ಚಿತ. ಆದ-ರೆ, ನಾವು ಜೀವಿಸಿದ ಅವಧಿಯಲ್ಲಿ ಮಾಡಿದ ಪುಣ್ಯಕಾರ್ಯಗಳು ಸದಾ ಸ್ಮರಣೀಯವಾಗಿ ಉಳಿಯುತ್ತವೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲ ರೇಣುಕ ವೀರಮುಕ್ತಿ ಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.



ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ಭಕ್ತರ ಧಾರ್ಮಿಕ ಭಾವನೆಗಳಿಗೆ ಸಾಕ್ಷಿಯಾಗಿರುವ ಬನ್ನಿಕಟ್ಟಿ ಈಶ್ವರ ದೇವರ ಪೂಜಾ ಕಾರ್ಯಕ್ರಮದ ಅಂಗವಾಗಿ, ದಿವಂಗತ ಶ್ರೀಮತಿ ಶಂಕ್ರಮ್ಮ ಕೊಂ. ಪರಮೇಶ್ವರಪ್ಪ ಬಳಿಗಾರ ಅವರ ಪುಣ್ಯಸ್ಮರಣೆಯ ನಿಮಿತ್ತ ಆಯೋಜಿಸಿದ್ದ ಅಮೃತಾರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಬನ್ನಿಕಟ್ಟಿ ಮಂದಿರಕ್ಕೆ ಪೂಜೆ ಸಲ್ಲಿಸಿ, ಸಸಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಸಾನಿಧ್ಯ ವಹಿಸಿದ್ದ ಹೂವಿನ ಶಿಗ್ಲಿ ವಿರಕ್ತಮಠದ ಚನ್ನವೀರ ಮಹಾಸ್ವಾಮಿಗಳು ಮಾತನಾಡಿ, ನಮಗೆ ಜನ್ಮ ನೀಡಿ, ನಮ್ಮ ಬೆಳವಣಿಗೆಗೆ ಕಾರಣ-ರಾದ ತಂದೆ-ತಾಯಿ ಹಾಗೂ ಪೂರ್ವಜರ ಉಪಕಾರವನ್ನು ಸ್ಮರಿಸುವುದು ನಮ್ಮ ಕರ್ತವ್ಯವಾಗಿದೆ. ಹಿರಿಯರ ಆತ್ಮಕ್ಕೆ ಶಾಂತಿ ದೊ-ರೆಯಲಿ, ಅವರ ಆಶೀರ್ವಾದ ಸದಾ ಕುಟುಂಬದ ಮೇಲಿರಲಿ ಎಂದು ಪ್ರಾರ್ಥಿಸುವುದರ ಜೊತೆ-ಗೆ, ಅವರ ಸಂಪ್ರದಾಯ ಮತ್ತು ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಬೇಕು. ಹಿರಿಯರ ಸ್ಮರಣಾರ್ಥ ಬನ್ನಿಕಟ್ಟಿ ಮಂದಿರವನ್ನು ನಿರ್ಮಿಸಿರುವ ಬಳಿಗಾರ ಕುಟುಂಬದ ಕಾರ್ಯ ಅವಿಸ್ಮರಣೀಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಗಜ್ಜಿಗಟ್ಟಿ ಮಠದ ಶಿವಲಿಂಗ ಶರ ಮೂರ್ತಿಶ್ವರ ಮಹಾಸ್ವಾಮಿಗಳು, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ನಡೋಜ ಮನು ಪರಮೇಶ್ವರಪ್ಪ ಬಳಿಗಾರ, ಟಿ. ಈಶ್ವರ, ಗ್ಯಾರಂಟಿ ಸಮಿತಿ ಅಧ್ಯಕ್ಷ ರಾಜು ಮಡಿವಾಳರ, ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷ ಎಸ್.ಪಿ. ಬಳಿಗಾರ, ಮಧು ಬಳಿಗಾರ, ಆನಂದ ಬಳಿಗಾರ, ಮಹೇಶ್ ಬಳಿಗಾರ, ಸುನಿಲ್ ಮಹಾಂತಶೆಟ್ಟರ್, ವಿಜಿ ಪಡಿಗೇರಿ, ಸೋಮಣ್ಣ ಡಾಣಗಲ್, ವೀರಣ್ಣ ಪವಾಡದ, ಡಿ.ವೈ. ಹುನಗುಂದ, ರಾಜರತ್ನ ಹುಲಗೂರ, ಸಿದ್ದಣ್ಣ ಯಲಿಗಾರ, ನಾರಾಯಣ ಹರವಿ, ಈರಣ್ಣ ಅಕ್ಕೂರು ಸೇರಿದಂತೆ ಹಲವು ರಾಜಕೀಯ ಮುಖಂಡರು, ಶಿಗ್ಲಿ ಗ್ರಾಮದ ಗುರು-ಹಿರಿಯರು, ಬಳಿಗಾರ ಕುಟುಂಬದ ಸದಸ್ಯರು, ಅಭಿಮಾನಿಗಳು ಹಾಗೂ ಹಿತೈಷಿಗಳು ಪಾಲ್ಗೊಂಡಿದ್ದರು.

## ಸಡಗರ-ಸಂಭ್ರಮದಿಂದ 71ನೇ ರಾಜ್ಯೋತ್ಸವ ಆಚರಣೆಗೆ ನಿರ್ಧಾರ

**ಹರಿಹರ :** ನವೆಂಬರ್ 1ರಂದು 71ನೇ ಕನ್ನಡ ರಾಜ್ಯೋತ್ಸವವನ್ನು ಸಡಗರ-ಸಂಭ್ರಮ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ತಹಶೀಲ್ದಾರ್ ಸಂತೋಷಕುಮಾರ್ ತಿಳಿಸಿದರು.




ತಾಲೂಕು ಆಡಳಿತ ಹಾಗೂ ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಗರದ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಕಳೆದ ವರ್ಷದ ರಾಜ್ಯೋತ್ಸವ ಆಚರಣೆ ಸಂದರ್ಭದಲ್ಲಿ ಎದುರಾದ ಲೋಪದೋಷ ಹಾಗೂ ಅಡಚಣೆಗಳನ್ನು ಸರಿಪಡಿಸಿಕೊಂಡು, ಈ ಬಾರಿ ರಾಜ್ಯೋತ್ಸವವನ್ನು ಉತ್ತಮ ರೀತಿಯಲ್ಲಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗುವುದು. ಕಾರ್ಯಕ್ರಮ ಯಶಸ್ವಿಗೊಳಿಸಲು ವಿವಿಧ ಇಲಾಖೆಗಳ ಅಧಿಕಾರಿಗಳು, ಕನ್ನಡಪರ ಸಂಘಟನೆಗಳು ಹಾಗೂ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಪಾಲ್ಗೊಂಡಿದ್ದ ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು ಮಾತನಾಡಿ, ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಉತ್ತಮ ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳು, ಸಂಗೀತ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ರಾಜ್ಯೋತ್ಸವದ ಸಂದರ್ಭದಲ್ಲಿ ಗುರುತಿಸಿ ಅಭಿನಂದಿಸಬೇಕು ಎಂದು ಸಲಹೆ ನೀಡಿದರು.

ಕರುನಾಡ ಕದಂಬ ರಕ್ಷಣಾ ವೇದಿಕೆಯ ರಾಜ್ಯ ಅಧ್ಯಕ್ಷ ಹೆಚ್ ಸುಧಾಕರ್, ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕ್ ಅಧ್ಯಕ್ಷ ರಮೇಶ್ ಮಾನೆ, ನಗರ ಘಟಕದ ಅಧ್ಯಕ್ಷ ಪ್ರೀತಂ ಬಾಬು, ಶಶಿ ನಾಯ್ಕ, ಬಿಎಸ್‌ಪಿ ಹನುಮಂತಪ್ಪ, ಚಿದಾನಂದ ಕಂಚಿಕೇರಿ, ಮಂಜುನಾಥ ನಡುವಿನಕೇರಿ, ನಾಗರಾಜ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಜೀಯಾ ಅಹ್ಮದ್ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ತಮ್ಮ ಅಭಿಪ್ರಾಯ ಮತ್ತು ಸಲಹೆಗಳನ್ನು ನೀಡಿದರು.

ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಸುಮಲತಾ ಎಸ್.ಪಿ., ಕ್ಷೇತ್ರ ಶಿಕ್ಷಣಾಧಿಕಾರಿ ಡಿ. ದುರುಗಪ್ಪ, ಪಿಎಸ್‌ಐ ಪ್ರವೀಣ ಓಲೇಕಾರ, ತಾಲೂಕು ಆರೋಗ್ಯಾಧಿಕಾರಿ ಡಾ. ಅಬ್ದುಲ್ ಖಾದರ್, ಪೌರಾಯುಕ್ತ ವಿ. ಈರಮ್ಮ, ತಾಲೂಕು ಸಮಾಜ ಕಲ್ಯಾಣಾಧಿಕಾರಿ ಹನುಮಂತಪ್ಪ ನಾಯ್ಕ, ಬಿಸಿಎಂ ಅಧಿಕಾರಿ ಆಸ್ಮಾಭಾನು, ಬೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ಲಕ್ಷ್ಮಣ, ತಾಲೂಕು ಅರಣ್ಯಾಧಿಕಾರಿ ಅಮೃತ, ಮೀನುಗಾರಿಕೆ ಇಲಾಖೆಯ ನೇತ್ರಾಜ್ ಹಾಗೂ ಪಶು ವೈದ್ಯಕೀಯ ಮತ್ತು ಪಶುಸಂಗೋಪನಾ ಇಲಾಖೆಯ ಡಾ. ತಿಪ್ಪೇಸ್ವಾಮಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಅಣ್ಣಪ್ಪ ಅಜ್ಜೇರಗೆ ಭೀಮ್ ಆರ್ಮಿ ಸಂಘಟನೆಯಿಂದ ಸನ್ಮಾನ

**ಹರಿಹರ :** ದಾವಣಗೆರೆ ನಗರದ ಎವಿಕೆ ಕಾಲೇಜು ಸಮೀಪದ ಗುರುಭವನದಲ್ಲಿ ಭೀಮ್ ಆರ್ಮಿ ಜೈ ಭೀಮ್ ಸಂಘಟನೆಯಿಂದ ಆಯೋಜಿಸಿದ್ದ ಜಿಲ್ಲಾ ಮತ್ತು ತಾಲೂಕು ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಹಾಗೂ ರಾಜ್ಯಮಟ್ಟದ ಅಧ್ಯಯನ ಶಿಬಿರದಲ್ಲಿ ಗಾಯಕ ಅಣ್ಣಪ್ಪ ಅಜ್ಜೇರ ಅವರನ್ನು ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಅಣ್ಣಪ್ಪ ಅಜ್ಜೇರ ಅವರು ಡಾ. ಬಿ.ಆರ್. ಅಂಬೇಡ್ಕರ್ ಅವರ ಹೋರಾಟ ಮತ್ತು ಚಿಂತನೆಗಳನ್ನು ಬಿಂಬಿಸುವ ಕ್ರಾಂತಿಕಾರಿ ಗೀತೆಗಳನ್ನು ಹಾಡಿ ಪ್ರೇಕ್ಷಕರ ಮನಸೂರೆಗೊಂಡರು. ಅವರ ಗಾಯನಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ಗಣ್ಯರು, ಅಜ್ಜೇರ ಅವರನ್ನು ಸನ್ಮಾನಿಸಿದರು.

ಭೀಮ್ ಆರ್ಮಿ ರಾಜ್ಯಾಧ್ಯಕ್ಷ ಪ್ರಸನ್ನ ಹೊಸೂರು, ರಾಜ್ಯ ಸಂಘಟನಾ ಕಾರ್ಯದರ್ಶಿ ನಿಂಗಪ್ಪ ಬಿ., ಮಹಿಳಾ ಜಿಲ್ಲಾಧ್ಯಕ್ಷೆ ಸುಮಾ ವೈ., ಶಿವರಾಜ್ ಎನ್. ಆನೆಗೊಂಡ ಸೇರಿದಂತೆ ರಾಜ್ಯ ಸಂಘಟನೆಯ ಸದಸ್ಯರು, ವಿವಿಧ ಜಿಲ್ಲೆ ಹಾಗೂ ತಾಲೂಕು ಘಟಕಗಳ ಅಧ್ಯಕ್ಷರು, ಪದಾಧಿಕಾರಿಗಳು ಮತ್ತು ಭೀಮ್ ಆರ್ಮಿ ಸಂಘಟನೆಯ ಅಭಿಮಾನಿಗಳು ಉಪಸ್ಥಿತರಿದ್ದರು.




## ಕಬ್ಬು ಬೆಳೆಗಾರರ ಸಮಸ್ಯೆ ಇತ್ಯರ್ಥಕ್ಕೆ ಕೇಂದ್ರ ಸರ್ಕಾರ ಉನ್ನತ ಮಟ್ಟದ ಸಮಿತಿ ರಚನೆ ಸ್ವಾಗತ ದಾಡಿಬಾವಿ

**ನವಲಗುಂದ :** ಕರ್ನಾಟಕ ಮಹಾರಾಷ್ಟ್ರ ಸೇರಿದಂತೆ ಖಬ್ಬು ಬೆಳೆಗಾರರ ವಿವಿಧ ಬೇಡಿಕೆಗಳನ್ನು ಹಾಗೂ (ಎಂ ಎಸ ಪಿ) ಘೋಷಣೆ ಮಾರುಕಟ್ಟೆಯ ನ್ಯಾಯಸಮ್ಮತವಾದ ಬೆಲೆ ಹಾಗೂ ಇತರೆ ಬೇಡಿಕೆಗಳನ್ನು ಮುಂದಿಟ್ಟು ರಾಜ್ಯದ ಮತ್ತು ನೆರೆ ರಾಜ್ಯದ ರೈತರ ಹಿತವನ್ನ ಕಾಪಾಡಲು ಕೇಂದ್ರ ಸರ್ಕಾರ ನೀತಿ ಆಯೋಗದ ಮಾಜಿ ಸದಸ್ಯರು ಕೃಷಿ ತಜ್ಞ ಹಾಗೂ ಅರ್ಥಶಾಸ್ತ್ರಜ್ಞ ಪ್ರೊ: ರಮೇಶ್ ಚಂದ ನೇತೃತ್ವದಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಿ ರಾಷ್ಟದ ಕಬ್ಬು ಬೆಳೆಯುವ ರೈತರ ಹಿತ ಕಾಪಾಡಲು ಹಾಗೂ ಸಮಸ್ಯೆ ಇತ್ಯರ್ಥ ಪಡಿಸಲು ಕೇಂದ್ರ ಸರ್ಕಾರದ ನಿರ್ಧಾರ ಸ್ವಾಗತರ್ಹ.



ಎಂದು ಜಿಲ್ಲಾ ಬಿಜೆಪಿ ಗ್ರಾಮೀಣ ಕಾರ್ಯದರ್ಶಿ ಹಾಗೂ ಅಣ್ಣಿಗೇರಿ ಪ್ರಾಥಮಿಕ ಕೃಷಿ ಮತ್ತು ಸಹಕಾರ ಗ್ರಾಮೀಣ ಅಭಿವೃದ್ಧಿ ಬ್ಯಾಂಕ ಅಧ್ಯಕ್ಷರಾದ ದೇವರಾಜ್ ಬ. ದಾಡಿಬಾವಿ ಕೇಂದ್ರದ ನಿರ್ಧಾರ ಸ್ವಾಗತಿಸಿದರು.

ಹಲವಾರು ದಿನಗಳಿಂದ ನಡೆಯುತ್ತಿರುವ ಅನ್ನದಾತರ ಹೋರಾಟ ಮಾಡುತ್ತಿದ್ದು ರೈತರಿಗೆ ಸಮಸ್ಯೆ ಆಗದಂತೆ ಕೇಂದ್ರ ಸಚಿವರಾದ ಪ್ರಲಾದ ಜೋಶಿ ರವರು ದೆಹಲಿಯಲ್ಲಿ ರೈತರ ಜೊತೆ ದ್ವಿಪಕ್ಷೀಯ ಮಾತುಕತೆ ಮಾಡಿ ಕೇಂದ್ರದ ಕೃಷಿ ಸಚಿವರನ್ನ ರಾಜ್ಯದ ಮುಖ್ಯಮಂತ್ರಿಗಳನ್ನ ಒಳಗೊಂಡಂತೆ ಎಲ್ಲಾ ಅಧಿಕಾರಿಗಳ ಜೊತೆ ಚರ್ಚಿಸಿ ನಿರ್ಧಾರ ಕೈಗೊಂಡಿರುವುದು ರೈತರ ಶಾಶ್ವತ ಸಮಸ್ಯೆ ಪರಿಹಾರದ ನಿರ್ಧಾರಗಳನ್ನು ಕೇಂದ್ರ ಸರ್ಕಾರ ಕೈಗೊಳ್ಳುವಲ್ಲಿ ಯಶಸ್ವಿಯಾಗಿದೆ ಕೇಂದ್ರ ಸಚಿವರಾದ ಪ್ರಹ್ಲಾದ ಜೋಶಿ ರವರು ರಾಜ್ಯದ ರೈತರ ಸಮಸ್ಯೆಗಳು ಬಂದಾಗ ರಾಜ್ಯದ ರೈತರ ಪರವಾಗಿ ಗಟ್ಟಿ ಧ್ವನಿಯಾಗಿ ಕೇಂದ್ರದಲ್ಲಿ ವಿವಿಧ ಬೆಳೆಗಳಾದ ರಾಗಿ ಜೋಳ ತೊಗರೆ ಬೇಳೆ ಹೆಸರು ಶೇಂಗಾ ಹಲವಾರು ಬೆಳೆಗಳಿಗೆ ಕೇಂದ್ರ ಸರ್ಕಾರದಿಂದ ಸಿಗಬೇಕಾದಂತ ನ್ಯಾಯಯುತವಾದ ಬೆಲೆಗಳನ್ನು ದೊರಕಿಸಿ ಕೊಟ್ಟಿದ್ದು ಅವರ ರೈತ ಪರ ಕಾಳಜಿಯನ್ನ ತೋರಿಸುತ್ತದೆ ಕೇವಲ ರಾಜಕೀಯ ಉದ್ದೇಶಗಳನ್ನು ಇಟ್ಟುಕೊಂಡು ಕೆಲವೊಂದಿಷ್ಟು ಜನ ಕೇಂದ್ರ ಸಚಿವರ ವಿರುದ್ಧ ಇಲ್ಲ ಸಲ್ಲದ ಆರೋಪಗಳನ್ನು ಮಾಡುತ್ತಿದ್ದು ವೈಯಕ್ತಿಕ ಕುಟುಂಬದ ಬಗ್ಗೆ ಟೀಕೆಗಳನ್ನು ಮಾಡುತ್ತಿದ್ದು ಖಂಡನೀಯ ರಾಷ್ಟದ ರೈತರ ಹಿತ ಕಾಪಾಡುವಲ್ಲಿ ನರೇಂದ್ರ ಮೋದಿಜಿ ಅವರ ಸರ್ಕಾರ ಸದಾವಕಾಲ ಶ್ರಮಿಸುತ್ತಿದೆ ಜಾಗತಿಕ ಮಟ್ಟದಲ್ಲಿ ದೇಶದಲ್ಲಿ ಕೃಷಿ ಹಾಗೂ ಕೃಷಿ ಉತ್ಪನ್ನಗಳಿಗೆ ವಿಶೇಷವಾದ ಬೆಲೆ ಸಿಕ್ಕಿರುವುದು ನರೇಂದ್ರ ಮೋದಿ ಅವರ ಸರ್ಕಾರದಲ್ಲಿ ರೈತರ ಸಮಸ್ಯೆಗಳು ಸಹಾನುಭೂತಿಯಿಂದ ಕೇಂದ್ರ ಸರ್ಕಾರದ ಉನ್ನತ ಮಟ್ಟದ ಸಮಿತಿ ಬಗೆಹರಿಸಲಿದೆ ಎಂಬ ವಿಶ್ವಾಸ ನನಗಿದೆ ಎಂದು ದೇವರಾಜ್ ಬ. ದಾಡಿಬಾವಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ

ಉತ್ತರ ಕರ್ನಾಟಕ ಸುದ್ದಿಗಳು
ಕನ್ನಡ ದಿನ ಪತ್ರಿಕೆ
UTTARA KARNATKA SUDDIGALU
Kannada Daily Morning

# ಆರೋಗ್ಯದ ಹೆಸರಿನಲ್ಲಿ ಲೂಟಿ, ಔಷಧದ ಹೆಸರಿನಲ್ಲಿ ವಂಚನೆ

**ಭಾ**ರತದ ಪ್ರತಿಯೊಬ್ಬ ನಾಗರಿಕನಿಗೂ ಗುಣಮಟ್ಟದ ಶಿಕ್ಷಣ ಮತ್ತು ಆರೋಗ್ಯ ಉಚಿತವಾಗಿ ದೊರೆಯಬೇಕು ಎಂಬುದು ಕೇವಲ ಬೇಡಿಕೆಯಲ್ಲ; ಅದು ಘನತೆಯಿಂದ ಬದುಕಬೇಕೆಂಬ ಮನುಷ್ಯನ ಮೂಲಭೂತ ಆಶಯ. ಆದರೆ ಈ ದೇಶದಲ್ಲಿ ಶಿಕ್ಷಣ ಮತ್ತು ಆರೋಗ್ಯವನ್ನು ಜನಸಾಮಾನ್ಯರಿಗೆ ಸುಲಭವಾಗಿ, ಕೈಗೆಟುಕುವ ದರದಲ್ಲಿ ಒದಗಿಸಬೇಕೆಂಬ ಒಕ್ಕೊರಲಿನ ಕೂಗು ಇನ್ನೂ ಸಂಪೂರ್ಣವಾಗಿ ಸಾಕಾರಗೊಂಡಿಲ್ಲ. ಒಂದು ಕಡೆ ಚಿಕಿತ್ಸೆಗಾಗಿ ಸಾಲ ಮಾಡಬೇಕಾದ ಅನಿವಾರ್ಯತೆ, ಮತ್ತೊಂದು ಕಡೆ ಔಷಧಗಳ ಬೆಲೆ ಏರಿಕೆಯಿಂದ ಕಂಗಾಲಾಗುತ್ತಿರುವ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳು. ಇಂತಹ ಸಂದರ್ಭದಲ್ಲಿ ಔಷಧಗಳ ಬೆಲೆಯನ್ನು ಮನಬಂದಂತೆ ಹೆಚ್ಚಿಸಿ ಮಾರಾಟ ಮಾಡುವುದು, ನಕಲಿ ಔಷಧಗಳನ್ನು ತಯಾರಿಸಿ ಮಾರುಕಟ್ಟೆಗೆ ಬಿಡುವುದು, ಜನರ ಅನಿವಾರ್ಯತೆಯನ್ನು ದುರುಪಯೋಗಪಡಿಸಿಕೊಳ್ಳುವುದು ಇವೆಲ್ಲವೂ ಸಮಾಜದ ಆತ್ಮಸಾಕ್ಷಿಯನ್ನು ಪ್ರಶ್ನಿಸುವ ಗಂಭೀರ ಸಂಗತಿಗಳಾಗಿವೆ. ಇತ್ತೀಚೆಗೆ ಪತ್ರಿಕೆಗಳಲ್ಲಿ ಪ್ರಕಟವಾಗುವ ಔಷಧಗಳ ಬೆಲೆ ಏರಿಕೆ, ನಕಲಿ ಔಷಧಗಳ ಮಾರಾಟ ಮತ್ತು ಔಷಧ ವಂಚನೆಗೆ ಸಂಬಂಧಿಸಿದ ಸುದ್ದಿಗಳು ಜನರಲ್ಲಿ ಆತಂಕ ಮೂಡಿಸುತ್ತಿವೆ. ಔಷಧವೆಂದರೆ ಕೇವಲ ಒಂದು ಉತ್ಪನ್ನವಲ್ಲ. ಅದು ರೋಗಿಯ ಪಾಲಿಗೆ ಭರವಸೆ, ಕುಟುಂಬದ ಪಾಲಿಗೆ ನಿರೀಕ್ಷೆ, ಜೀವ ಉಳಿಸಿಕೊಳ್ಳಬೇಕೆಂಬ ಹೋರಾಟದಲ್ಲಿರುವ ವ್ಯಕ್ತಿಯ ಪಾಲಿಗೆ ಕೊನೆಯ ಆಸರೆ. ಇಂತಹ ಜೀವಾಧಾರವನ್ನೇ ಕೆಲವರು ಲಾಭ ಗಳಿಸುವ ದಂದ-ಯಾಗಿ ಪರಿವರ್ತಿಸಿಕೊಂಡರೆ, ಅವರ ವ್ಯಾಪಾರ ಮನೋಭಾವವನ್ನು ಯಾವ ಪದಗಳಿಂದ ಖಂಡಿಸಬೇಕು? ಮನುಷ್ಯನ ನೋವನ್ನೇ ಬಂಡವಾಳ ಮಾಡಿಕೊಂಡು ಹಣದ ಚೀಲ ತುಂಬಿಸಿಕೊಳ್ಳುವ ಈ ಮನಸ್ಥಿತಿಯನ್ನು ನಾಗರಿಕ ಸಮಾಜ ತೀವ್ರವಾಗಿ ಪ್ರಶ್ನಿಸಲೇಬೇಕು. ಹಸಿವಾದಾಗ ಊಟವನ್ನು ಮುಂದೂಡಬಹುದು. ಹೊಸ ಬಟ್ಟೆ ಖರೀದಿಸುವುದನ್ನು ಮುಂದೂಡಬಹುದು. ಅನಗತ್ಯ ಖರ್ಚುಗಳಿಗೆ ಕಡಿವಾಣ ಹಾಕಬಹುದು. ಆದರೆ ಹೃದಯದ ಕಾಯಿಲೆ, ಮಧುಮೇಹ, ಕ್ಯಾನ್ಸರ್, ಮೂತ್ರಪಿಂಡದ ಸಮಸ್ಯೆ ಅಥವಾ ಮತ್ತಾವುದೇ ಗಂಭೀರ ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗೆ ಔಷಧ ಸೇವನೆಯನ್ನು ಮುಂದೂಡುವುದು ಯಾವಾಗಲೂ ಸಾಧ್ಯವಿಲ್ಲ. ದಿನನಿತ್ಯದ ಔಷಧಗಳನ್ನೇ ಅವಲಂಬಿಸಿರುವ ರೋಗಿಗೆ ಬೆಲೆ ಏರಿಕೆಯ ಹೊಡೆತ ಬಿದ್ದರೆ, ಅದು ಆತನ ಜೇಬಿಗೆ ಬೀಳುವ ಹೊಡೆತ ಮಾತ್ರವಲ್ಲ; ಆರೋಗ್ಯದ ಮೇಲೆಯೂ ಪರಿಣಾಮ ಬೀರುವ ಅಪಾಯವಿದೆ. ದುಬಾರಿ ಔಷಧಗಳನ್ನು ಖರೀದಿಸಲು ಸಾಧ್ಯವಾಗದ ಕುಟುಂಬಗಳು ಪ್ರಮಾಣ ಕಡಿಮೆ ಮಾಡುವುದು, ಮಾತ್ರೆಗಳನ್ನು ಬಿಟ್ಟುಬಿಡುವುದು ಅಥವಾ ವೈದ್ಯರ ಸಲಹೆಯಿಲ್ಲದೆ ಪರ್ಯಾಯ ಔಷಧಗಳನ್ನು ಹುಡುಕುವುದು ಮುಂತಾದ ಅಪಾಯಕಾರಿ ನಿರ್ಧಾರಗಳಿಗೆ ತಳ್ಳಲ್ಪಡಬಹುದು. ಇಲ್ಲಿ ಒಂದು ಪ್ರಶ್ನೆ ಸಹಜವಾಗಿ ಉದ್ಭವಿಸುತ್ತದೆ. ಕಾಯಿಲೆ ಬರುವುದು ಮನುಷ್ಯನ ಆಯ್ಕೆಯಲ್ಲ. ಆದರೆ ಕಾಯಿಲೆಯಾದ ನಂತರ ಬದುಕುಳಿಯಲು ಬೇಕಾದ ಔಷಧಗಳನ್ನು ಖರೀದಿಸುವ ಸಾಮರ್ಥ್ಯ ಮಾತ್ರ ಆತನ ಆರ್ಥಿಕ ಸ್ಥಿತಿಯನ್ನು ಅವಲಂಬಿಸಬೇಕೇ? ಹಣವಿರುವವರಿಗೆ ಗುಣಮಟ್ಟದ ಚಿಕಿತ್ಸೆ, ಹಣವಿಲ್ಲದವರಿಗೆ ಅನಿವಾರ್ಯ ಸಂಕಷ್ಟ ಇಂತಹ ವ್ಯವಸ್ಥೆಯನ್ನು ಆರೋಗ್ಯವಂತ ಸಮಾಜದ ಲಕ್ಷಣವೆಂದು ಕರೆಯಲು ಸಾಧ್ಯವೇ? ಆರೋಗ್ಯವು ಶ್ರೀಮಂತರಿಗೆ ಮಾತ್ರ ಸಿಗುವ ಸೌಲಭ್ಯವಲ್ಲ; ಅದು ಪ್ರತಿಯೊಬ್ಬರಿಗೂ ದೊರೆಯಬೇಕಾದ ಮಾನವೀಯ ಹಕ್ಕು. ಅದನ್ನು ಕೇವಲ ಮಾರುಕಟ್ಟೆಯ ಬೇಡಿಕೆ ಮತ್ತು ಪೂರೈಕೆ-ಯ ಲೆಕ್ಕಾಚಾರಕ್ಕೆ ಸೀಮಿತಗೊಳಿಸುವುದು ಅಪಾಯಕಾರಿ. ಔಷಧಗಳ ಬೆಲೆ ನಿಗದಿಗೆ ಸಂಬಂಧಿಸಿದಂತೆ ಸರ್ಕಾರದ ನಿಯಂತ್ರಣ ವ್ಯವಸ್ಥೆಗಳಿವೆ. ಕೆಲವು ಔಷಧಗಳ ಗರಿಷ್ಠ ಚಿಲ್ಲರೆ ಬೆಲೆಯನ್ನು ನಿಯಂತ್ರಿಸಲಾಗುತ್ತದೆ. ಔಷಧ ಬೆಲೆ ನಿಯಂತ್ರಣ ಆದೇಶದ ಅಡಿಯಲ್ಲಿ ಬರುವ ಔಷಧಗಳನ್ನು ನಿಗದಿತ ಮಿತಿಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದು ಕಾನೂನುಬಾಹಿರವಾಗಬಹುದು. ಆದರೆ ನಿಯಮಗಳು ಕಾಗದದ ಮೇಲಿರುವುದರಿಂದ ಮಾತ್ರ ಜನರಿಗೆ ನ್ಯಾಯ ದೊರೆಯುವುದಿಲ್ಲ. ಅವುಗಳ ಅನುಷ್ಠಾನದಲ್ಲಿ ಪಾರದರ್ಶಕತೆ, ನಿರಂತರ ತಪಾಸಣೆ ಮತ್ತು ತಪ್ಪಿತಸ್ಥರ ವಿರುದ್ಧ ಪರಿಣಾಮಕಾರಿ ಕ್ರಮ ಅಗತ್ಯ. ಔಷಧದ ಮೂಲ ಬೆಲೆ, ತಯಾರಿಕಾ ವೆಚ್ಚ, ವಿತರಣೆ ವೆಚ್ಚ ಮತ್ತು ಮಾರಾಟದ ಬೆಲೆಗಳ ನಡುವಿನ



ವ್ಯತ್ಯಾಸದ ಕುರಿತು ಅಗತ್ಯವಿದ್ದಲ್ಲಿ ಪರಿಶೀಲನೆ ನಡೆಯಬೇಕು. ನಿಯಂತ್ರಣಕ್ಕೆ ಒಳಪಡುವ ಔಷಧಗಳ ಬೆಲೆ ನಿಯಮಗಳನ್ನು ಉಲ್ಲಂಘಿಸುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಜನಸಾಮಾನ್ಯರಿಗೆ ತಮ್ಮ ಹಕ್ಕುಗಳ ಕುರಿತು ಅರಿವು ಮೂಡಿಸಬೇಕು.

> **ಔಷಧವೂ ವ್ಯಾಪಾರದ ಸರಕಾದ-ರೆ, ರೋಗಿಯ ಜೀವಕ್ಕೆ ಬೆಲೆ ಕಟ್ಟುವವರಾರು?**

ಇದಕ್ಕಿಂತಲೂ ಭೀಕರವಾದದ್ದು ನಕಲಿ ಔಷಧಗಳ ದಂಧೆ. ನಕಲಿ ಔಷಧ ತಯಾರಿಸುವವರು ಅಥವಾ ಮಾರಾಟ ಮಾಡುವವರು ಕೇವಲ ಕಾನೂನನ್ನು ಉಲ್ಲಂಘಿಸುವವರಲ್ಲ; ಅವರ ಕೃತ್ಯದಿಂದ ರೋಗಿಯ ಜೀವಕ್ಕೆ ಅಪಾಯ ಉಂಟಾಗಬಹುದು. ಔಷಧದಲ್ಲಿ ಇರಬೇಕಾದ ಸಕ್ರಿಯ ಘಟಕಾಂಶವೇ ಇಲ್ಲದಿದ್ದರೆ, ಅದರ ಪ್ರಮಾಣ ತಪ್ಪಾಗಿದ್ದರೆ ಅಥವಾ ಗುಣಮಟ್ಟದ ಮಾನದಂಡಗಳನ್ನು ಉಲ್ಲಂಘಿಸಿದ್ದರೆ, ಚಿಕಿತ್ಸೆ ಪರಿಣಾಮಕಾರಿಯಾಗದಿರುವ ಸಾಧ್ಯತೆ ಇದೆ. ಕೆಲವು ಸಂದರ್ಭಗಳಲ್ಲಿ ರೋಗದ ತೀವ್ರತೆ ಹೆಚ್ಚಬಹುದು; ಮತ್ತಷ್ಟು ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ಸೋಂಕುಗಳಿಗೆ ಸಂಬಂಧಿಸಿದ ಔಷಧಗಳ ಗುಣಮಟ್ಟದ ವೈಫಲ್ಯವು ಸಾರ್ವಜನಿಕ ಆರೋಗ್ಯದ ಮೇಲೂ ಗಂಭೀರ ಪರಿಣಾಮ ಬೀರಬಹುದು. ಒಬ್ಬ ವ್ಯಕ್ತಿ ನಕಲಿ ಚಿನ್ನವನ್ನು ಖರೀದಿಸಿದರೆ ಆತನಿಗೆ ಆರ್ಥಿಕ ನಷ್ಟವಾಗಬಹುದು. ನಕಲಿ ಬಟ್ಟೆ ಖರೀದಿಸಿದರೆ ವಸ್ತುವಿನ ಗುಣಮಟ್ಟದ ಬಗ್ಗೆ ಅಸಮಾಧಾನವಾಗಬಹುದು. ಆದರೆ ನಕಲಿ ಔಷಧ ಖರೀದಿಸಿದ ವ್ಯಕ್ತಿಗೆ ಆಗುವ ನಷ್ಟವನ್ನು ಹಣದಲ್ಲಿ ಅಳೆಯಲು ಸಾಧ್ಯವೇ? ಆತನಿಗೆ ಔಷಧದ ಗುಣಮಟ್ಟದ ಬಗ್ಗೆ ತಿಳಿದಿರದಿರಬಹುದು. ವೈದ್ಯರು ಬರೆದ ಚೀಟಿಯನ್ನು ಹಿಡಿದು, ಔಷಧ ಮಾರಾಟಗಾರನ ಮೇಲೆ ನಂಬಿಕೆ ಇಟ್ಟು, ಜೀವ ಉಳಿಯುತ್ತದೆ ಎಂಬ ಭರವಸೆಯಿಂದ ಔಷಧ ಸೇವಿಸುತ್ತಾನೆ. ಆ ನಂಬಿಕೆಯನ್ನೇ ದುರುಪಯೋಗಪಡಿಸಿಕೊಳ್ಳುವವರು ಮನುಷ್ಯತ್ವದ ಎಲ್ಲ ಮಿತಿಗಳನ್ನು ಮೀರುತ್ತಾರೆ. ಇಂತಹ ಕೃತ್ಯಗಳನ್ನು ಕೇವಲ ವ್ಯಾಪಾರದಲ್ಲಿನ ಅಕ್ರಮವೆಂದು ನೋಡುವುದಕ್ಕಿಂತ, ಅದರ ಪರಿಣಾಮ ಮತ್ತು ಉದ್ದೇಶಕ್ಕೆ ಅನುಗುಣವಾಗಿ ಗಂಭೀರ ಅಪರಾಧವಾಗಿ ಪರಿಗಣಿಸಿ ಕ್ರಮ ಕೈಗೊಳ್ಳುವುದು ಅಗತ್ಯ. ಔಷಧ ತಯಾರಿಕೆಯಿಂದ ಹಿಡಿದು ವಿತರಣೆ, ಸಗಟು ಮಾರಾಟ ಮತ್ತು ಚಿಲ್ಲರೆ ಮಾರಾಟದವರೆಗೆ ಪ್ರತಿಯೊಂದು ಹಂತದಲ್ಲೂ ಹೊಣೆಗಾರಿಕೆ ಇರಬೇಕು. ಪರವಾನಗಿ ಇಲ್ಲದೆ ಔಷಧ ತಯಾರಿಸುವವರು, ನಕಲಿ ಉತ್ಪನ್ನಗಳನ್ನು ಮಾರುಕಟ್ಟೆಗೆ ಬಿಡುವವರು, ಅವುಗಳ ಗುಣಮಟ್ಟದ ಬಗ್ಗೆ ತಪ್ಪು ಮಾಹಿತಿ ನೀಡುವವರು ಹಾಗೂ ತಿಳಿದಿದ್ದರೂ ಅಂತಹ ಔಷಧಗಳನ್ನು ಮಾರಾಟ ಮಾಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು. ನಕಲಿ ಔಷಧಗಳ ಪತ್ತೆಯಾದಾಗ ಕೇವಲ ಕೆಲವು ಮಾದರಿಗಳನ್ನು ವಶಪಡಿಸಿಕೊಳ್ಳುವುದು ಅಥವಾ ಅಂಗಡಿಗೆ ನೋಟಿಸ್ ನೀಡುವುದಷ್ಟೇ ಸಾಕಾಗುವುದಿಲ್ಲ. ಅವು ಎಲ್ಲಿಂದ ಬಂದವು, ಯಾವ ಜಾಲದ ಮೂಲಕ ಹರಡಿದವು, ಎಷ್ಟು ಜನರಿಗೆ ಮಾರಾಟವಾಗಿವೆ ಎಂಬುದನ್ನು ಪತ್ತೆಹಚ್ಚಬೇಕು. ತಪ್ಪಿತಸ್ಥರು ಎಷ್ಟೇ ಪ್ರಭಾವಿಗಳಾಗಿದ್ದರೂ ಕಾನೂನಿನ ಮುಂದೆ ಉತ್ತರದಾಯಕರಾಗಬೇಕು. ಇಲ್ಲಿ ಔಷಧ ನಿಯಂತ್ರಣ ಇಲಾಖೆಯ ಜವಾಬ್ದಾರಿ ಮಹತ್ವದ್ದಾಗಿದೆ. ಔಷಧಗಳ ಗುಣಮಟ್ಟದ ನಿಯಮಿತ ಪರೀಕ್ಷೆ, ಪರವಾನಗಿಗಳ ಪರಿಶೀಲನೆ, ಅನುಮಾನಾಸ್ಪದ ಉತ್ಪನ್ನಗಳ ತ್ವರಿತ ತನಿಖೆ, ನಕಲಿ ಔಷಧಗಳ ಪತ್ತೆ ಮತ್ತು ಸಾರ್ವಜನಿಕರಿಗೆ ಎಚ್ಚರಿಕೆ ನೀಡುವ ವ್ಯವಸ್ಥೆ ಇನ್ನಷ್ಟು ಪರಿಣಾಮಕಾರಿಯಾಗಬೇಕು. ಔಷಧದ ಮಾದರಿ ಪರೀಕ್ಷೆಯ ಫಲಿತಾಂಶಗಳನ್ನು ವಿಳಂಬವಿಲ್ಲದೆ ಪರಿಶೀಲಿಸಿ, ಅಪಾಯಕಾರಿ ಉತ್ಪನ್ನಗಳ ಮಾರಾಟವನ್ನು ತಡೆಯಬೇಕು. ತಪ್ಪಿತಸ್ಥರ ವಿರುದ್ಧ ಕೈಗೊಂಡ ಕ್ರಮಗಳ ಬಗ್ಗೆ ಜನರಿಗೆ ಮಾಹಿತಿ ನೀಡುವ ಮೂಲಕ ವ್ಯವಸ್ಥೆಯ ಮೇಲಿನ ವಿಶ್ವಾಸವನ್ನು ಬಲಪಡಿಸಬೇಕು. ಆರೋಗ್ಯ-ಕ್ಕೆ ಸಂಬಂಧಿಸಿದ ಅಪರಾಧಗಳಲ್ಲಿ ತನಿಖೆಯ ವಿಳಂಬವೇ ಮತ್ತಷ್ಟು ಜನರ ಅಪಾಯಕ್ಕೆ ಕಾರಣವಾಗಬಾರದು. ಸರ್ಕಾರವು ನೀಡುವ ಉಚಿತ ಅಥವಾ ಕೈಗೆಟುಕುವ ದರದ ಆರೋಗ್ಯ ಸೇವೆ ಎಂದ-ರೆ ಆಸ್ಪತ್ರೆಯಲ್ಲಿ ವೈದ್ಯರ ಸಲಹೆ ಉಚಿತವಾಗಿ ದೊರೆಯುವುದಷ್ಟೇ ಅಲ್ಲ. ಅಗತ್ಯ ಪರೀಕ್ಷೆಗಳು, ಗುಣಮಟ್ಟದ ಔಷಧಗಳು, ತುರ್ತು ಚಿಕಿತ್ಸೆ ಮತ್ತು ದೀರ್ಘಕಾಲದ ಕಾಯಿಲೆಗಳಿಗೆ ಬೇಕಾದ ಚಿಕಿತ್ಸೆಯೂ ಸಾಮಾನ್ಯ ಜನರ ಕೈಗೆಟುಕುವಂತಿರಬೇಕು. ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಔಷಧಗಳ ನಿರಂತರ ಲಭ್ಯತೆ ಖಚಿತವಾಗಬೇಕು. ಜನೌಷಧಿ ಕೇಂದ್ರಗಳಂತಹ ವ್ಯವಸ್ಥೆಗಳ ಮೂಲಕ ಗುಣಮಟ್ಟದ ಜನರಿಕ್ ಔಷಧಗಳ ಲಭ್ಯತೆ ಮತ್ತು ಅವುಗಳ ಕುರಿತು ಜನರ ಅರಿವನ್ನು ಹೆಚ್ಚಿಸಬೇಕು. ಆದರೆ ಕಡಿಮೆ ಬೆಲೆಯ ಹೆಸರಿನಲ್ಲಿ ಗುಣಮಟ್ಟದ ಬಗ್ಗೆ ಯಾವುದೇ ರಾಜಿ ಇರಬಾರದು. ಔಷಧ ಅಗ್ಗವಾಗಿರಲಿ, ದುಬಾರಿಯಾಗಿರಲಿ ಅದು ಸುರಕ್ಷಿತವಾಗಿರಬೇಕು, ಪರಿಣಾಮಕಾರಿಯಾಗಿರಬೇಕು ಮತ್ತು ನಿಗದಿತ ಗುಣಮಟ್ಟವನ್ನು ಹೊಂದಿರಬೇಕು. ವೈದ್ಯರು ಮತ್ತು ಔಷಧ ಮಾರಾಟಗಾರರ ಮೇಲಿನ ಜನರ ವಿಶ್ವಾಸವೂ ಈ ವ್ಯವಸ್ಥೆಯ ಪ್ರಮುಖ ಭಾಗವಾಗಿದೆ. ಬಹುತೇಕ ವೈದ್ಯರು ಮತ್ತು ಔಷಧ ವಿತರಕರು ತಮ್ಮ ವೃತ್ತಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸುತ್ತಾರೆ ಎಂಬುದನ್ನು ಮರೆಯಬಾರದು. ಆದರೆ ಆ ವೃತ್ತಿಪರ ನಂಬಿಕೆಯನ್ನು ದುರುಪಯೋಗಪಡಿಸಿಕೊಳ್ಳುವವರ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ, ಇಡೀ ವ್ಯವಸ್ಥೆಯ ಮೇಲೆಯೇ ಅನುಮಾನ ಮೂಡುತ್ತದೆ. ಔಷಧದ ಅಗತ್ಯ, ಅದರ ಬಳಕೆ, ಪರ್ಯಾಯಗಳ ಲಭ್ಯತೆ ಮತ್ತು ವೆಚ್ಚದ ಕುರಿತು ರೋಗಿಗೆ ಸೂಕ್ತ ಮಾಹಿತಿ ದೊರೆಯಬೇಕು. ವೈದ್ಯರ ಸಲಹೆಯಿಲ್ಲದೆ ಔಷಧಗಳನ್ನು ಬದಲಾಯಿಸುವುದು ಅಥವಾ ಚಿಕಿತ್ಸೆ ನಿಲ್ಲಿಸುವುದು ಅಪಾಯಕಾರಿ ಎಂಬ ಅರಿವನ್ನೂ ಜನರಲ್ಲಿ ಮೂಡಿಸಬೇಕು. ವೈದ್ಯಕೀಯ ಸೇವೆ ಮತ್ತು ಔಷಧ ವ್ಯಾಪಾರದಲ್ಲಿ ನೈತಿಕತೆ ಕೇವಲ ಆದರ್ಶದ ಮಾತಾಗಿರದೆ, ಪ್ರತಿದಿನದ ಕಾರ್ಯವಿಧಾನವಾಗಬೇಕು.

ಜನಸಾಮಾನ್ಯರಿಗೂ ಕೆಲವು ಜವಾಬ್ದಾರಿಗಳಿವೆ. ಔಷಧ ಖರೀದಿಸುವಾಗ ಬಿಲ್ ಪಡೆಯುವುದು, ಪ್ಯಾಕೆಟ್ ಮೇಲಿನ ವಿವರಗಳು, ಬ್ಯಾಚ್ ಸಂಖ್ಯೆ, ಅವಧಿ ಮುಗಿಯುವ ದಿನಾಂಕ ಮತ್ತು ತಯಾರಕರ ಮಾಹಿತಿಯನ್ನು ಪರಿಶೀಲಿಸುವುದು, ಅನುಮಾನಾಸ್ಪದ ಔಷಧಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ನೀಡುವುದು ಅಗತ್ಯ. ಔಷಧದ ಬೆಲೆ ಅಥವಾ ಗುಣಮಟ್ಟದ ಬಗ್ಗೆ ಅನುಮಾನವಿದ್ದರೆ ವೈದ್ಯರು ಅಥವಾ ಅರ್ಹ ಔಷಧ ತಜ್ಞರ ಸಲಹೆ ಪಡೆಯಬೇಕು. ಆದರೆ ಎಲ್ಲ ಹೊಣೆಗಾರಿಕೆಯನ್ನು ಗ್ರಾಹಕರ ಮೇಲೆ ಹಾಕುವುದು ಸರಿಯಲ್ಲ. ನಕಲಿ ಔಷಧವನ್ನು ಗುರುತಿಸುವ ತಾಂತ್ರಿಕ ಸಾಮರ್ಥ್ಯ ಪ್ರತಿಯೊಬ್ಬ ಸಾಮಾನ್ಯ ವ್ಯಕ್ತಿಗೂ ಇರಲು ಸಾಧ್ಯವಿಲ್ಲ. ಆದ್ದರಿಂದ ಪರಿಣಾಮಕಾರಿ ನಿಯಂತ್ರಣ ವ್ಯವಸ್ಥೆಯನ್ನು ರೂಪಿಸುವುದು ಮತ್ತು ಅದರ ಅನುಷ್ಠಾನವನ್ನು ಖಚಿತಪಡಿಸುವುದು ಸರ್ಕಾರ ಹಾಗೂ ಸಂಬಂಧಪಟ್ಟ ಸಂಸ್ಥೆಗಳ ಕರ್ತವ್ಯ. ಅತ್ಯಂತ ಮುಖ್ಯವಾಗಿ, ಶಿಕ್ಷಣ ಮತ್ತು ಆರೋಗ್ಯವನ್ನು ಸಂಪೂರ್ಣವಾಗಿ ಮಾರುಕಟ್ಟೆಯ ಕರುಣೆಗೆ ಬಿಡಬಾರದು. ಸರ್ಕಾರಗಳು ಜನರ ತೆರಿಗೆಯಿಂದ ಕಾರ್ಯನಿರ್ವಹಿಸುತ್ತವೆ. ಆ ತೆ-ರಿಗೆ ಹಣದ ಬಳಕೆಯಲ್ಲಿ ಜನರ ಜೀವ, ಆರೋಗ್ಯ ಮತ್ತು ಕಲ್ಯಾಣಕ್ಕೆ ಆದ್ಯತೆ ದೊರೆಯಬೇಕು. ಬಡವರು ಚಿಕಿತ್ಸೆಗಾಗಿ ಆಸ್ತಿ ಮಾರುವ, ಸಾಲ ಮಾಡುವ ಅಥವಾ ಕುಟುಂಬದ ಇತರ ಅಗತ್ಯಗಳನ್ನು ತ್ಯಜಿಸುವ ಪರಿಸ್ಥಿತಿ ಕಡಿಮೆಯಾಗಬೇಕು. ಸಾರ್ವಜನಿಕ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವುದು, ವೈದ್ಯಕೀಯ ವೆಚ್ಚವನ್ನು ನಿಯಂತ್ರಿಸುವುದು ಮತ್ತು ಗುಣಮಟ್ಟದ ಔಷಧಗಳನ್ನು ಎಲ್ಲರಿಗೂ ಕೈಗೆಟುಕುವಂತೆ ಮಾಡುವುದು ದೀರ್ಘಕಾಲೀನ ಸಾರ್ವಜನಿಕ ನೀತಿಯ ಪ್ರಮುಖ ಗುರಿಯಾಗಬೇಕು. ಔಷಧ ತಯಾರಿಸುವ ಕೈಗಳು ಜೀವ ಉಳಿಸುವ ಔಷಧಗಳನ್ನು ರೂಪಿಸಬೇಕೇ ಹೊರತು ಜೀವದ ಬೆಲೆಗೆ ಲೆಕ್ಕ ಹಾಕುವ ದಂಧೆಯಲ್ಲಿ ತೊಡಗಬಾರದು. ಔಷಧ ಮಾರಾಟ ಮಾಡುವವರು ರೋಗಿಯ ಅನಿವಾರ್ಯತೆಯನ್ನು ದುರುಪಯೋಗಪಡಿಸಿಕೊಳ್ಳಬಾರದು. ಲಾಭ ಗಳಿಸುವುದು ವ್ಯಾಪಾರದ ಸಹಜ ಭಾಗವಾಗಿರಬಹುದು; ಆದರೆ ಆ ಲಾಭಕ್ಕಾಗಿ ಮನುಷ್ಯನ ಜೀವವನ್ನು ಅಪಾಯಕ್ಕೆ ತಳ್ಳುವ ಹಕ್ಕು ಯಾರಿಗೂ ಇಲ್ಲ. ಹಣಗಳಿಸುವ ಆಸೆ ಮಾನವೀಯತೆಯನ್ನು ನುಂಗಿದಾಗ, ವ್ಯಾಪಾರವು ಸೇವೆಯ ಮಿತಿಯನ್ನು ಮೀರಿ ಶೋಷಣೆಯ ರೂಪ ತಾಳುತ್ತದೆ. ಇಂದು ದೇಶದ ಜನರು ಕೇಳುತ್ತಿರುವುದು ಅಸಾಧ್ಯವಾದದ್ದೇನಲ್ಲ. ಗುಣಮಟ್ಟದ ಶಿಕ್ಷಣ ಬೇಕು, ಕೈಗೆಟುಕುವ ಆರೋಗ್ಯ ಸೇವೆ ಬೇಕು, ಸುರಕ್ಷಿತ ಔಷಧಗಳು ಬೇಕು, ನಿಯಮ ಉಲ್ಲಂಘಿಸುವವರ ವಿರುದ್ಧ ನಿಷ್ಪಕ್ಷಪಾತ ಕ್ರಮ ಬೇಕು. ಇದು ಯಾವುದೇ ಒಂದು ವರ್ಗದ ಬೇಡಿಕೆಯಲ್ಲ; ಪ್ರತಿಯೊಂದು ಕುಟುಂಬದ ಆತಂಕ ಮತ್ತು ಪ್ರತಿಯೊಬ್ಬ ನಾಗರಿಕನ ನ್ಯಾಯಸಮ್ಮತ ನಿರೀಕ್ಷೆಯಾಗಿದೆ. ನಕಲಿ ಔಷಧ ತಯಾರಿಸುವವರ ವಿರುದ್ಧ, ತಿಳಿದಿದ್ದರೂ ಅವುಗಳನ್ನು ಮಾರಾಟ ಮಾಡುವವರ ವಿರುದ್ಧ ಮತ್ತು ಕಾನೂನುಬಾಹಿರವಾಗಿ ಔಷಧಗಳ ಬೆಲೆ ಹೆಚ್ಚಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ತಪ್ಪಿತಸ್ಥರಿಗೆ ಕಾನೂನುಬದ್ಧ ಶಿಕ್ಷೆಯಾಗಬೇಕು; ಜನರ ಜೀವದೊಂದಿಗೆ ಆಟವಾಡುವ ದಂಧೆಗಳಿಗೆ ಕಡಿವಾಣ ಬೀಳಬೇಕು. ಈ ಅನೈತಿಕ ಕೃತ್ಯಗಳಲ್ಲಿ ತೊಡಗುವವರನ್ನು ಸಮಾಜ ತೀವ್ರವಾಗಿ ಖಂಡಿಸಬೇಕು. ಔಷಧವು ಜೀವ ಉಳಿಸುವ ಸಾಧನವಾಗಬೇಕೇ ಹೊರತು ಜೀವದ ಮೇಲೆ ನಡೆಯುವ ವ್ಯಾಪಾರವಾಗಬಾರದು. ಆರೋಗ್ಯವು ಹಣವಂತರ ಸವಲತ್ತಾಗದೆ, ಪ್ರತಿಯೊಬ್ಬರಿಗೂ ದೊರೆಯುವ ಹಕ್ಕಾಗಿ ರೂಪುಗೊಳ್ಳಬೇಕು. ಜನರ ಜೀವಕ್ಕಿಂತ ಲಾಭ ದೊಡ್ಡದಲ್ಲ; ಮಾನವೀಯತೆಗಿಂತ ಹಣ ಮುಖ್ಯವಲ್ಲ.



ಅನಂತ ಪಪ್ಪು,
ಬೆಳಗಾವಿ
ಮೋ:9448527870

## ಚುನಾವಣಾ ನೀತಿ ಸಂಹಿತೆ: ಮಹರ್ಷಿ ವಾಲ್ಮೀಕಿ ಜಯಂತಿ ಸಾಂಕೇತಿಕ ಆಚರಣೆ

**ಹರಿಹರ :** ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆ ಹಿನ್ನೆಲೆಯಲ್ಲಿ ಜಗಳೂರು, ದಾವಣಗೆರೆ ಹಾಗೂ ಹರಿಹರ ತಾಲೂಕುಗಳ ವ್ಯಾಪ್ತಿಯಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಅ. 26ರಂದು ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಸಾಂಕೇತಿಕವಾಗಿ ಆಚರಿಸಲು ಸರ್ಕಾರದ ಸುತ್ತೋಲೆಯಲ್ಲಿ ಸೂಚಿಸಲಾಗಿದೆ ಎಂದು ತಹಶೀಲ್ದಾರ್ ಸಂತೋಷಕುಮಾರ್ ತಿಳಿಸಿದರು.

ತಾಲೂಕು ಆಡಳಿತ ಹಾಗೂ ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಗರದ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಕುರಿತು ಬುಧವಾರ ಕರೆಯಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಭೆಯಲ್ಲಿ ಉಪಸ್ಥಿತರಿದ್ದ ತಾಲೂಕು ವಾಲ್ಮೀಕಿ ಸಮಾಜದ ಮುಖಂಡರು, ಸಮಾಜದ ವತಿಯಿಂದ ಅ. 26ರಂದು ನಗರದ ಹರಿಹರೇಶ್ವರ ದೇವಸ್ಥಾನದಿಂದ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರದ ಮೆರವಣಿಗೆಯನ್ನು ನಗರದ ಪ್ರಮುಖ ಬೀದಿಗಳಲ್ಲಿ ನಡೆಸಿ, ಜಯಂತಿಯನ್ನು ಸಾಂಕೇತಿಕವಾಗಿ ಆಚರಿಸುವ ಕುರಿತು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಆಡಳಿತಾಧಿಕಾರಿ ಮಂಜಣ್ಣ, ನಗರಸಭೆ ಮಾಜಿ ಸದಸ್ಯ ಆರ್. ದಿನೇಶಬಾಬು, ವಾಲ್ಮೀಕಿ ಸಮಾಜದ ನಗರಾಧ್ಯಕ್ಷ ಆಟೋ ರಾಜು, ಕಾರ್ಯದರ್ಶಿ ಧನರಾಜ್ ಆರ್., ಹಂಚಿನ ನಾಗಣ್ಣ, ಎಂ.ಎಸ್. ಸಿದ್ದಪ್ಪ, ಮಹಾಂತೇಶ, ಹನುಮಂತಪ್ಪ, ಹಾಲೇಶ, ಪಾಂಡುರಂಗಪ್ಪ ಹಾಗೂ ಮಹೇಶಪ್ಪ ದೇವರಬೆಳಕೇರಿ ಸಭೆಯಲ್ಲಿ ತಮ್ಮ ಅಭಿಪ್ರಾಯಗಳನ್ನು ತಿಳಿಸಿದರು. ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಸುಮಲತಾ ಎಸ್.ಪಿ., ಕ್ಷೇತ್ರ ಶಿಕ್ಷಣಾಧಿಕಾರಿ ಡಿ. ದುರುಗಪ್ಪ, ಪಿಎಸ್ಐ ಪ್ರವೀಣ ಓಲೇಕಾರ, ತಾಲೂಕು ಆರೋಗ್ಯಾಧಿಕಾರಿ ಡಾ. ಅಬ್ದುಲ್ ಖಾದರ್, ಪೌರಾಯುಕ್ತೆ ವಿ. ಈರಮ್ಮ, ತಾಲೂಕು ಸಮಾಜ ಕಲ್ಯಾಣಾಧಿಕಾರಿ ಹನುಮಂತಪ್ಪ ನಾಯ್ಕ, ಬಿಸಿಎಂ ಅಧಿಕಾರಿ ಆಸ್ಮಾಭಾನು, ಬೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ಲಕ್ಷ್ಮಣ, ತಾಲೂಕು ಅರಣ್ಯಾಧಿಕಾರಿ ಅಮೃತ, ಮೀನುಗಾರಿಕೆ ಇಲಾಖೆಯ ನೇತ್ರಾಜ್ ಹಾಗೂ ಪಶುಪಾಲನಾ ಮತ್ತು ಪಶುವೈದ್ಯಕೀಯ ಇಲಾಖೆಯ ಡಾ. ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.




## ಹೊಸ ಕೆರೆ ನಿರ್ಮಾಣ ಆದ್ಯತೆ ನೀಡಲಾಗಿದೆ: ತಾ.ಪಂ. ಇಒ ಚಂದ್ರಶೇಖರ ಬಿ. ಕಂದಕೂರ

**ಗಜೇಂದ್ರಗಡ:** ತಾಲೂಕಿನ ಶಾಂತಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಶಾಂತಗೇರಿ ಗ್ರಾಮದಲ್ಲಿ ವಿಬಿ ಜಿ ರಾಮ್ ಜಿ ಯೋಜನೆಯಡಿ ಕಾಗೆಕೆರೆ ಪುನಶ್ಚೇತನ ಕಾಮಗಾರಿ ಸ್ಥಳಕ್ಕೆ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಚಂದ್ರಶೇಖರ ಬಿ ಕಂದಕೂರ ಗುರುವಾರ ಭೇಟಿ ನೀಡಿದರು.

ಈ ವೇಳೇ ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ವಿಬಿಜಿ ರಾಮ್ ಜಿ ಯೋಜನೆಯಡಿ ಕೆರೆ ಹೂಳು ತೆಗೆದು ಅಭಿವೃದ್ಧಿ ಪಡಿಸುವುದರ ಜೊತೆಗೆ ಕೂಲಿಕಾರರಿಗೆ ಕೆಲಸ ನೀಡಲಾಗುತ್ತಿದೆ. ಕೂಲಿಕಾರರು ಸರಿಯಾಗಿ ಕೆಲಸ ಮಾಡಿದರೆ ನಿರಂತರ ಕೆಲಸ ಕೊಡುವುದಾಗಿ ತಿಳಿಸಿದರು.

ಪ್ರತಿ ದಿನ ಎರಡು ಬಾರಿ ಹಾಜರಾತಿ ಕಾಡ್ಡಾಯವಾಗಿ, ವಿಬಿ ಜಿ ರಾಮ್ ಜಿ ಯೋಜನೆಯಡಿ ಪ್ರತಿ ದಿನ ಕೂಲಿ ಮೊತ್ತ 382 ರೂ. ನೀಡಲಾಗುತ್ತಿದೆ. ಜಾಬ್ ಕಾರ್ಡ್‌ಗೆ 125 ಮಾನವ ದಿನಗಳನ್ನು ಕೊಡಲಾಗುತ್ತಿದೆ. ಕೂಲಿಕಾರರು ವಲಸೆ ಹೋಗಿ ದುಡಿಯುವ ಬದಲು ಇದ್ದೂರಲ್ಲೇ ಕೆಲಸ ನೀಡಲಾಗುತ್ತಿದೆ. ಸಂದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕೂಲಿಕಾರರಿಗೆ ವಿಬಿ ಜಿ ರಾಮ್ ಜಿ ಯೋಜನೆಯಡಿ ಸಮುದಾಯ ಮತ್ತು ವೈಯಕ್ತಿಕ ಕಾಮಗಾರಿಗಳನ್ನು ಒಳಗೊಂಡು ಒಟ್ಟು 375 ಕಾಮಗಾರಿಗಳನ್ನು ಮಾಡಿಕೊಳ್ಳಲು ಅವಕಾಶವಿದೆ. ಈ ಯೋಜನೆಯಲ್ಲಿ ಆಸ್ತಿ ಸೃಜನೆ ಮತ್ತು ಜಲ ಮೂಲಗಳ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಆ ನಿಟ್ಟಿನಲ್ಲಿ ಹೊಸ ಕೆರೆ ನಿರ್ಮಾಣ ಅವಕಾಶವಿದೆ ಎಂದರು.

ನಂತರ ಕೂಲಿಕಾರರ ಜೊತೆಗೆ ಸಂವಾದ ನಡೆಸಿ ಹೊಸ ಕೆರೆ ನಿರ್ಮಾಣ ಮಾಡುವ ಕುರಿತು ಚರ್ಚಿಸಿದರು. ಆಗ ಹೊಸ ಕೆರೆ ನಿರ್ಮಾಣ ಮಾಡಲು ಜಾಗವಿರುವುದು ತಿಳಿಸಿದರು. ಹೊಸ ಕೆರೆ ನಿರ್ಮಾಣ ಮಾಡುವುದರಿಂದ ಕೂಲಿಕಾರರಿಗೆ ನಿರಂತರ ಕೆಲಸ ಕೊಡುವುದು. ಹರಿದು ಹೋಗುವ ನೀರನ್ನು ನಿಲ್ಲಿಸಿ ಪ್ರಾಣಿ ಪಕ್ಷಿಗಳಿಗೆ ಕುಡಿಯಲು ಅನಕೂಲವಾಗುತ್ತದೆ. ಇದರ ಜೊತೆಗೆ ಅಂತರ್ಜಲ ಮಟ್ಟ ಹೆಚ್ಚಳವಾಗುತ್ತದೆ. ಆ ನಿಟ್ಟಿನಲ್ಲಿ ಹೊಸ ಕೆರೆ ನಿರ್ಮಾಣ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಹೊಸ ಕೆರೆ ನಿರ್ಮಾಣ ಮಾಡಲು ಮೂರು ಕಡೆ ಖುದ್ದು ಸ್ಥಳ ಪರಿಶೀಲನೆ ಮಾಡಿ ಕೆರೆ ಮಾಡಲು ಸಾಧ್ಯವಿದೆ ಎಂದು ಅರಿತು ಹೊಸ ಕೆರೆ ನಿರ್ಮಾಣಕ್ಕೆ ಹೆಚ್ಚುವರಿ ಕ್ರಿಯಾ ಯೋಜನೆ ತಯಾರಿಸಿ ತಾಲೂಕು ಪಂಚಾಯತಿಗೆ ಕೊಡಲು ಪಿಡಿಒ ಹಾಗೂ ಡಿಇಒ ಅವರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಪಿಡಿಒ ಎಸ್.ಎಸ್. ರಿತ್ತಿ, ಡಿಇಒ ಪ್ರಕಾಶ ನರೇಗಲ್, ಜಿಕೆಎಂ ಶಿವಗಂಗಾ ಹಲ್ಲಣನವರು, ಕಾಯಕ ಬಂಧುಗಳು ಹಾಗೂ ಕೂಲಿಕಾರರು ಇದ್ದರು.



UTTARA KARNATAKA SUDDIGALU KANNADA DAILY MORNING OWNER, PUBLISHER, BY: AVINASH S SALIMANI, PUBLISHED FROM: 220 SHIVANAND NAGAR, NAVANAGAR, HUBLI_DHARWAD KARNATAKA- 580025, PRINTED AT: SHIVANI PRINTERS, NEW COURT OPPOSITE PLOT NO 28RS NO 312/ 3B GARAG COMPLEX GADAG, AT: GADAG- 582101, AT: KARNATAKA, EDITOR BY : AVINASH S SALIMANI